ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೦

# ಪಟ್ಟಿ – ೦೪

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : ೦೪ನೇ ಮಾರ್ಚ್ , ೨೦೧೬

---

## ಸಮೂಹ – V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು

---

## ರಾಜ್ಯದಲ್ಲಿರುವ ಭಾಷಾ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೨೬೫ (೩೦೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಭಾಷಾ ಅಲ್ಪಸಂಖ್ಯಾತರ ಹಾಗೂ ದಾರ್ಮಿಕ ಅಲ್ಪಸಂಖ್ಯಾತ ವರ್ಗದವರು ನಡೆಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆಗಳು ಎಷ್ಟು;

(ಆ) ಈ ಪೈಕಿ ಇಲ್ಲಿಯವರೆವಿಗೂ ಇಂತಹ ಎಷ್ಟು ಶಾಲೆಗಳಿಗೆ ಅಲ್ಪಸಂಖ್ಯಾತರ ಶಾಲೆಗಳೆಂದು ಘೋಷಣೆ ಮಾಡಲಾಗಿದೆ;

(ಇ) ಅಲ್ಪಸಂಖ್ಯಾತರ ಶಾಲೆಗಳೆಂದು ಘೋಷಿಸಲು ಅನುಸರಿಸಲಾಗುತ್ತಿರುವ ಮಾನದಂಡಗಳು ಏನು; ಈ ಮಾನದಂಡಗಳನ್ನು ಅನುಸರಿಸಲು ಈವರೆವಿಗೂ ಎಷ್ಟು ಸುತ್ತೋಲೆಗಳನ್ನು ಸರ್ಕಾರಿ ಆದೇಶಗಳನ್ನು ಹೊರಡಿಸಲಾಗಿದೆ; (ಪ್ರತಿಯನ್ನು ಒದಗಿಸುವುದು)

(ಈ) ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯನ್ನಾಗಿ ಘೋಷಣೆ ಮಾಡಲು ಕೋರಿ ಈವರೆವಿಗೂ ಬಾಕಿ ಇರುವ ಪ್ರಸ್ತಾವನೆಗಳ ಸಂಖ್ಯೆಗಳು ಎಷ್ಟು;

(ಉ) ಎಷ್ಟು ಅವಧಿಯಿಂದ ಬಾಕಿ ಇದೆ, ಬಾಕಿ ಇರಲು ಕಾರಣಗಳು ಏನು? (ಜಿಲ್ಲಾವಾರು ಮಾಹಿತಿ ನೀಡುವುದು)

## R.I.E. ಶಿಕ್ಷಕರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೬೬ (೩೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ  ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರೌಢ ಶಾಲಾ ಇಂಗ್ಲೀಷ್ ಭಾಷಾ ಶಿಕ್ಷಕರ ವಿದ್ಯಾರ್ಹತೆ ಕುರಿತು ಹೈಕೋರ್ಟ್ ತೀರ್ಪಿನ ಸಾರಾಂಶವೇನು; ತೀರ್ಪಿನಿಂದ ಉದ್ಭವವಾಗಿರುವ ಸಮಸ್ಯೆಯ ಸ್ವರೂಪವೇನು; ಸರ್ಕಾರ ಯೋಚಿಸಿರುವ ಪರಿಹಾರ ಕ್ರಮಗಳೇನು; ಎಷ್ಟು ಜನ ಆರ್.ಐ.ಇ. ಮೂಲಕ ಪಿ.ಜಿ. ಡಿಪ್ಲೋಮಾ ವಿದ್ಯಾರ್ಹತೆ ಪಡೆದ ಶಿಕ್ಷಕರು ಪ್ರಸಕ್ತ ಕಾರ್ಯ ನಿರ್ವಹಿಸುತ್ತಿದ್ದಾರೆ;

(ಆ) ೨೦೦೩ರ ವೃಂದ ಮತ್ತು ನೇಮಕಾತಿಗಳನ್ನು ರದ್ದುಪಡಿಸಲಾಗಿದೆಯೇ; ಅನುದಾನಿತ ಶಾಲೆಗಳ ಹುದ್ದೆ ಭರ್ತಿಗೆ ಈ ಹಿನ್ನೆಲೆಯಲ್ಲಿ ತಾತ್ಕಾಲಿಕ ತಡೆ ಹಿಡಿಯಲಾಗಿದೆಯೇ;

(ಇ) ಪ್ರಸ್ತುತ ರಾಜ್ಯದಲ್ಲಿ ಪ್ರೌಢಶಾಲಾ ಶಿಕ್ಷಕರಿಗೆ ಇರುವ ವೃಂದ ನೇಮಕಾತಿ ನಿಯಮಗಳು ಯಾವುವು? (ವಿವರ ನೀಡುವುದು)

## ದೈಹಿಕ ಶಿಕ್ಷಕರ ವೃಂದ ಮತ್ತು ನಿಯಮಾವಳಿ ತಿದ್ದುಪಡಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೬೭ (೩೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ  ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೈಹಿಕ ಶಿಕ್ಷಕರ ವೃಂದ ಹಾಗೂ ನೇಮಕಾತಿ ನಿಯಮಾವಳಿಯ ತಿದ್ದುಪಡಿಯ ಕಾರ್ಯ ಎಷ್ಟು ವರ್ಷಗಳಿಂದ ಚಾಲನೆಯಲ್ಲಿದೆ;

ಈಗ ಯಾವ ಹಂತದಲ್ಲಿದೆ; ದೈಹಿಕ ಶಿಕ್ಷಕರೆಲ್ಲರೂ ದೈಹಿಕ ಶಿಕ್ಷಣ ಬೋಧಕರಾಗಿದ್ದಾರೆ, ಅವರನ್ನು ಸಹ ಶಿಕ್ಷಕರನ್ನಾಗಿ ಪರಿಗಣಿಸಲು ಇರುವ ಅಡೆತಡೆಗಳೇನು;

(ಆ) ಯಾವ ಕಾಲಮಿತಿಯೊಳಗೆ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಕಾರ್ಯ ಪೂರ್ಣಗೊಳಿಸಲಾಗುವುದು?

## ಉಪನ್ಯಾಸಕರಿಗೆ ಪದೋನ್ನತಿ ನೀಡುವ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೬೮ (೩೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರೌಢ ಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಉಪನ್ಯಾಸಕರಾಗಿ ಪದೋನ್ನತಿ ನೀಡಲು ಇರುವ ನಿಯಮಾವಳಿಗಳೇನು; ಈ ನಿಯಮಾವಳಿಗೆ ತಿದ್ದುಪಡಿ ತರುವುದಾಗಿ ಹಿಂದೆ ಸದನದಲ್ಲಿ ಭರವಸೆ ನೀಡಲಾಗಿತ್ತು; ಪ್ರಸ್ತಾವಿಕ ತಿದ್ದುಪಡಿಗಳೇನು;

(ಆ) ಯಾವ ಕಾಲಮಿತಿಯೊಳಗೆ ತಿದ್ದುಪಡಿ ಮಾಡಿ ಕಳೆದ ೪ ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಪದೋನ್ನತಿ ನೀಡುವ ಕಾರ್ಯವನ್ನು ಆರಂಭಿಸಲಾಗುವುದು;

(ಇ) ಪದವಿ ಪೂರ್ವ ಉಪನ್ಯಾಸಕರಿಂದ ಅರ್ಹ ಉಪನ್ಯಾಸಕರಿಗೆ ಪದವಿ ಕಾಲೇಜುಗಳಿಗೆ ಪದೋನ್ನತಿ ನೀಡುವ ಕುರಿತು ಸರ್ಕಾರದ ಸದ್ಯದ ನಿಲುವೇನು; ಪದೋನ್ನತಿ ನೀಡುವ ಕುರಿತು ಯಾವಾಗ ತೀರ್ಮಾನ ಕೈಗೊಳ್ಳಲಾಗುವುದು?

## ರೋಸ್ಟರ್ ಮತ್ತು ವಿದ್ಯಾರ್ಥಿಗಳ ಸಂಖ್ಯೆ ಪಾಲನೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೬೯ (೩೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭಾಷಿಕ ಅಲ್ಪಸಂಖ್ಯಾತ ಶಾಲೆಗಳಲ್ಲಿ ಮೀಸಲಾತಿ ಹಾಗೂ ರೋಸ್ಟರ್ ಪಾಲನೆಯಿಂದ ಈ ಹಿಂದೆ ವಿನಾಯಿತಿ ನೀಡಲಾಗಿತ್ತೇ; ಪ್ರಸ್ತುತ ಇರುವ ನಿಯಮಾವಳಿಗಳೇನು;

(ಆ) ರೋಸ್ಟರ್ ವಿನಾಯಿತಿ ಭಾಷಿಕ ಅಲ್ಪಸಂಖ್ಯಾತ ಶಾಲೆಗಳಲ್ಲಿ ಇರಬೇಕಾದ ಕನಿಷ್ಠ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ವಿನಾಯಿತಿ ಇತ್ಯಾದಿ ವಿಷಯಗಳಲ್ಲಿ ಕರ್ನಾಟಕ ರಾಜ್ಯ ಸರ್ಕಾರದಿಂದ ಅನ್ಯಾಯವಾಗುತ್ತಿದೆ ಎಂಬ ಕೂಗು ನಿಜವೇ;

(ಇ) ಭಾಷಿಕ ಅಲ್ಪಸಂಖ್ಯಾತ ಸಂಸ್ಥೆಗಳಿಗೆ ಕರ್ನಾಟಕ ಸರ್ಕಾರದಿಂದ ನೀಡಲಾಗುತ್ತಿರುವ ರಿಯಾಯಿತಿ, ವಿನಾಯಿತಿ ಸೌಲಭ್ಯಗಳು ಯಾವುವು? (ಸಂಪೂರ್ಣ ವಿವರ ನೀಡುವುದು)

## ಪದವಿ ಪೂರ್ವ ಉಪನ್ಯಾಸಕರು ಮತ್ತು ಪ್ರಾಂಶುಪಾಲರು ಹಾಗೂ ಪ್ರೌಢಶಾಲಾ ಶಿಕ್ಷಕರ ವೇತನ ತಾರತಮ್ಯದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೭೦ (೪೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು, ಪ್ರಾಂಶುಪಾಲರು, ಹಾಗೂ ಪ್ರೌಢಶಾಲಾ ಶಿಕ್ಷಕರ ವೇತನದಲ್ಲಿ ಆಗಿರುವ ತಾರತಮ್ಯ ಕಳೆದ ಎರಡು ದಶಕಗಳಿಂದ ನಿವಾರಣೆಯಾಗದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ವೇತನ ತಾರತಮ್ಯ ನಿವಾರಣೆಗಾಗಿ ಶಿಕ್ಷಣ ಇಲಾಖೆ ಕಾರ್ಯದರ್ಶಿ ಅವರು ಸಲ್ಲಿಸಿದ ವರದಿಯಲ್ಲಿ ಪ್ರಸ್ತಾಪಿಸಿರುವ ಪ್ರಮುಖ ಅಂಶಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ವೇತನದಲ್ಲಿ ಆಗಿರುವಂತಹ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ಬಂಡವಾಳ ಹೂಡಿಕೆದಾರರ ಸಮಾವೇಶದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೭೧ (೪೨೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಿಂದಿನ ವರ್ಷಗಳಲ್ಲಿ ಮೂರು ಬಂಡವಾಳ ಹೂಡಿಕೆದಾರರ ಸಮಾವೇಶಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಸದರಿ ಬಂಡವಾಳ ಹೂಡಿಕೆದಾರರ ಸಮಾವೇಶಗಳಲ್ಲಿ ಆದಂತಹ ಒಪ್ಪಂದಗಳು ಎಷ್ಟು, ಹೂಡಿಕೆ ಮೊತ್ತ ಎಷ್ಟು ಮತ್ತು ಉದ್ಯೋಗ ಸೃಷ್ಟಿ ಎಷ್ಟು; (ವಲಯವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸದರಿ ಬಂಡವಾಳದಾರರ ಹೂಡಿಕೆಯ ಸಮಾವೇಶಗಳಲ್ಲಿ ಹೈದರಾಬಾದ್ ಕರ್ನಾಟಕದ ಆರು ಜಿಲ್ಲೆಗಳಲ್ಲಿ ಆದಂತಹ ಪ್ರಗತಿ ಏನು? (ಬಂಡವಾಳ ಹೂಡಿಕೆ, ಉದ್ಯೋಗ ಸೃಷ್ಟಿ, ವಲಯಗಳ ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ರೈಲ್ವೆ ಇಲಾಖೆಯ ಅಭಿವೃದ್ಧಿ ಮತ್ತು ಯೋಜನೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೭೨ (೪೨೮) ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ದೇಶದಲ್ಲಿಯೇ ಪ್ರಪ್ರಥಮವಾಗಿ ರೈಲ್ವೆ ಇಲಾಖೆ ಅಭಿವೃದ್ಧಿ ಮತ್ತು ಯೋಜನೆಗಳನ್ನು ತ್ವರಿತವಾಗಿ ಕಾರ್ಯಗತಗೊಳಿಸಲು ವಿಶೇಷ ಕಂಪನಿಯೊಂದನ್ನು ಸ್ಥಾಪಿಸಲಾಗಿರುವ ವಿಷಯವನ್ನು ಕೇಂದ್ರದ ರೈಲ್ವೆ ಸಚಿವರು ಪ್ರತಿಕಾ ಹೇಳಿಕೆ ಮುಖಾಂತರ ಘೋಷಣೆ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಬಂದಿದ್ದರೆ, ಸಂಪೂರ್ಣ ವಿವರ ನೀಡುವುದು)

(ಆ) ಈ ವಿಶೇಷ ಕಂಪನಿ ಸ್ಥಾಪಿಸುವುದರ ಕುರಿತು ಮಾನ್ಯ ಮುಖ್ಯ ಮಂತ್ರಿಗಳು ಒಪ್ಪಂದಕ್ಕೆ ಸಹಿ ಹಾಕಿರುವ ವಿಷಯದ ಬಗ್ಗೆ ಕೇಂದ್ರ ರೈಲ್ವೆ ಸಚಿವರು ಪ್ರತಿಕೆ ಹೇಳಿಕೆ ನೀಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ವಿಶೇಷ ಕಂಪನಿಯಡಿಯಲ್ಲಿ ಬರುವಂತಹ ಯೋಜನೆಗಳಾವುವು; ಗುರಿ ಮತ್ತು ಉದ್ದೇಶಗಳೇನು ಹಾಗೂ ಬಂಡವಾಳ ಹೂಡಿಕೆಯ ಕಾರ್ಯ ಸೂಚಿಗಳೇನು; (ಸಂಪೂರ್ಣ ಯೋಜನೆವಾರು ವಿವರ ನೀಡುವುದು)

(ಇ) ಹೈದರಾಬಾದ್-ಕರ್ನಾಟಕದ ಭಾಗಕ್ಕೆ ಮುಂಜೂರಾದ ರೈಲ್ವೆ ಯೋಜನೆಗಳ ಕಾಮಗಾರಿಗಳು ನಿಧಾನಗತಿಯಲ್ಲಿ ಅಥವಾ ಯಾವುದೇ ಪ್ರಗತಿ ಕಾಣದೇ ಕುಂಠಿತಗೊಂಡಿರುವುದು (ಉದಾ: ಕಲಬುರಗಿ ರೈಲ್ವೆ ವಿಭಾಗ ಹಾಗೂ ವಾಡಿ-ಗದಗ ರೈಲ್ವೆ ಮಾರ್ಗ, ಯಾದಗಿರಿಯ ಕೋಚ್ ಫ್ಯಾಕ್ಟರಿ ಹಾಗೂ ಇತರೆ ಯೋಜನೆಗಳು) ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದರೆ ಪ್ರಗತಿ ಕುಂಠಿತಗೊಂಡಿರುವುದಕ್ಕೆ ಕಾರಣಗಳೇನು? (ಯೋಜನಾವಾರು ಸಂಪೂರ್ಣ ವಿವರ ನೀಡುವುದು)

## ಹೈದ್ರಾಬಾದ್-ಕರ್ನಾಟಕ ಆರು ಜಿಲ್ಲೆಗಳಲ್ಲಿ ಮಳೆಯ ಅಭಾವದಿಂದ ಭೀಕರ ಬರಗಾಲದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೭೩ (೪೩೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೈದ್ರಾಬಾದ್-ಕರ್ನಾಟಕದ ಆರು ಜಿಲ್ಲೆಗಳು ಮಳೆಯು ಅಭಾವದಿಂದ ಬೀಕರ ಬರಗಾಲಕ್ಕೆ ತುತ್ತಾಗಿದ್ದು ಕುಡಿಯುವ ನೀರಿನ ಭಯಂಕರ ಸಮಸ್ಯೆ ಎದುರಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಬಂದಿದ್ದಲ್ಲಿ ಸಂಪೂರ್ಣ ವಿವರ ನೀಡುವುದು)

(ಆ) ಕುಡಿಯುವ ನೀರಿನ ತೀವ್ರ ಅಭಾವ ಇದ್ದ ಗ್ರಾಮಗಳ ಸಮೀಕ್ಷೆ ನಡೆಸಲಾಗಿದೆಯೇ; (ತಾಲ್ಲೂಕುವಾರು ಗ್ರಾಮಗಳ ಮಾಹಿತಿ ನೀಡುವುದು)

(ಇ) ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? ಮಾಹಿತಿ ನೀಡುವುದು)

## ಕೇಂದ್ರ ಸರ್ಕಾರದಿಂದ ಪ್ರವಾಸೋದ್ಯಮ ಇಲಾಖೆಗೆ ಬಿಡುಗಡೆಯಾದ ಹಣದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೪ (೪೩೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ನೇ ಸಾಲಿನ ಕೇಂದ್ರ ಸರ್ಕಾರದಿಂದ ಪ್ರವಾಸೋದ್ಯಮ ಇಲಾಖೆಗೆ ಬಿಡುಗಡೆ ಮಾಡಿರುವ ಹಣವೆಷ್ಟು;

(ಆ) ಬಿಡುಗಡೆ ಮಾಡಿರುವ ಹಣದಲ್ಲಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ;

(ಇ) ಬೆಂಗಳೂರು ದೇವನಹಳ್ಳಿ ನಂದಿಬೆಟ್ಟಕ್ಕೆ ಪ್ರವಾಸಿಗರ ಗಮನ ಸೆಳೆಯುವ ಉದ್ದೇಶದಿಂದ ಕೇಬಲ್ ಕಾರ್ ರೂಪಿಸುವ ಯೋಜನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)

## ರಾಮನಗರ ಜಿಲ್ಲೆಯಲ್ಲಿ ಕಲ್ಲು ಗಣಿ ಕ್ರಸ್ಸರ್‌ಗಳ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೫ (೪೩೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯಲ್ಲಿ ಕಲ್ಲು ಗಣಿ ನಡೆಸುತ್ತಿರುವ ಒಟ್ಟು ಕ್ರಸ್ಸರ್‌ಗಳ ಸಂಖ್ಯೆ ಎಷ್ಟು; ಇದರಿಂದ ಸರ್ಕಾರಕ್ಕೆ ಬರುತ್ತಿರುವ ರಾಜಧನ ಎಷ್ಟು; ಯಾವ ಮಾನದಂಡದಲ್ಲಿ ರಾಜಧನ ಸಂಗ್ರಹಿಸಲಾಗುತ್ತಿದೆ;

(ಆ) ಕ್ರಸ್ಷರ್‌ಗಳಿಂದ ಭಾರಿ ಭಾರಿ ಲಾರಿಗಳು ಬಂದು ಹೋಗುವುದರಿಂದ ರಸ್ತೆಗಳು ಸಂಪೂರ್ಣ ಹದಗೆಟ್ಟು ರೈತರ ಬೆಳೆಗಳಿಗೆ ದೂಳು ತುಂಬಿ ಬೆಳೆ ಮತ್ತು ರೈತರ ಆರೋಗ್ಯ ದುಸ್ಥರವಾಗಿದೆ; ಇದರ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ವಸತಿ ಹಾಗೂ ನಿವೇಶನ ಹಂಚಿಕೆ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೬ (೪೫೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ನೇ ಸಾಲಿನಲ್ಲಿ ವಸತಿ ನಿರ್ಮಾಣಕ್ಕಾಗಿ ನಿಗಧಿ ಪಡಿಸಿದ ಹಣವೆಷ್ಟು; ಆ ಪೈಕಿ ಖರ್ಚು ಮಾಡಿದ ಹಣವೆಷ್ಟು;

(ಆ) ೨೦೧೪–೧೫ನೇ ಸಾಲಿನಲ್ಲಿ ಯಾವ ಯಾವ ಯೋಜನೆಯಡಿಯಲ್ಲಿ ವಸತಿ ನಿರ್ಮಾಣ ಮಾಡಿ ಹಂಚಿಕೆ ಮಾಡಲಾಗಿದೆ; ಹಂಚಿಕೆಯಾಗಿರುವ ನಿವೇಶನಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೇಂದ್ರ ಸರ್ಕಾರದಿಂದ ವಸತಿ ನಿರ್ಮಾಣಕ್ಕಾಗಿ ರಾಜ್ಯಕ್ಕೆ ೨೦೧೩ ರಿಂದ ೨೦೧೬ರ ವರೆವಿಗೂ ಬಿಡುಗಡೆ ಮಾಡಿರುವ ಹಣವೆಷ್ಟು; ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಣದಲ್ಲಿ ರೂಪಿಸಿರುವ ಯೋಜನೆಗಳು ಯಾವುವು?

## ಗ್ರಾಮ ವಿಕಾಸ ಯೋಜನೆ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೭ (೪೩೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಗ್ರಾಮಗಳನ್ನು ಗ್ರಾಮ ವಿಕಾಸ ಯೋಜನೆಯಡಿಯಲ್ಲಿ ಆಯ್ಕೆ ಮಾಡಲಾಗಿದೆ; ಆಯ್ಕೆಯಾದ ಗ್ರಾಮಗಳು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು) ಹಾಗೆ ಆಯ್ಕೆಯಾದ ಗ್ರಾಮಗಳಿಗೆ ಬಿಡುಗಡೆ ಮಾಡಿರುವ ಹಣ ಎಷ್ಟು;

(ಆ) ಗ್ರಾಮ ವಿಕಾಸ ಯೋಜನೆಗೆ ಗ್ರಾಮಗಳನ್ನು ಆಯ್ಕೆ ಮಾಡಲು ಅನುಸರಿಸುವ ಮಾನದಂಡವೇನು; ಈ ಯೋಜನೆಯಡಿ ಕೈಗೊಳ್ಳುವ ಕಾಮಗಾರಿಗಳು ಯಾವುವು;

(ಇ) ೨೦೧೪–೧೫ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಕುಡಿಯುವ ನೀರು ಹಾಗೂ ಗ್ರಾಮೀಣ ರಸ್ತೆ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿರುವ ಹಣವೆಷ್ಟು?

## ಹೊಸ ಗ್ರಾಮಪಂಚಾಯತ್‌ಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೮ (೩೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೊಸ ಗ್ರಾಮ ಪಂಚಾಯಿತಿಗಳ ರಚನೆಯಾದ ನಂತರ ಅವುಗಳಗೆ ಅನುದಾನ ಬಿಡುಗಡೆ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ;

(ಆ) ಸರ್ಕಾರವು ಗ್ರಾಮಪಂಚಾಯತಿಗಳಿಗೆ ಯಾವ ಯಾವ ಮಾನದಂಡದ ಆಧಾರದ ಮೇಲೆ ಅನುದಾನವನ್ನು ನೀಡಲಾಗುತ್ತಿದೆ;

(ಇ) ರಾಜ್ಯದಲ್ಲಿ ಎಷ್ಟು ಗ್ರಾಮ ಪಂಚಾಯತಿಗಳಿಗೆ ಸ್ವಂತ ಕಟ್ಟಡಗಳಿಲ್ಲಾ; ಅವುಗಳ ಸಲುವಾಗಿ ಸರ್ಕಾರವು ಏನು ಕ್ರಮ ಕೈಗೊಂಡಿದೆ?

## ಗ್ರಾಮ ಪಂಚಾಯಿತಿಯಲ್ಲಿ ದ್ವಜಾರೋಹಣ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೯ (೩೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತಿಯಲ್ಲಿ ದ್ವಜ ಹಾರಿಸುವ ಪದ್ದತಿ ಯಾವ ಯಾವ ರಾಜ್ಯದಲ್ಲಿ ಜಾರಿಯಲ್ಲಿದೆ;

(ಆ) ಗ್ರಾಮ ಪಂಚಾಯತಿಯಲ್ಲಿ ದ್ವಜ ಹಾರಿಸುವ ಪದ್ದತಿಯಿಂದ ನೀತಿ ಸಂಹಿತೆ ಉಲ್ಲಂಘಿಸಿದ ಪ್ರಕರಣಗಳೇನಾದರು ದಾಖಲಾಗಿದೆಯೇ;

(ಇ) ದ್ವಜಾರೋಹಣಕ್ಕೆ ಸಂಬಂಧಿಸಿದಂತೆ ಯಾವ ನೀತಿ ನಿಯಮಗಳನ್ನು ಪಾಲಿಸಲಾಗುತ್ತಿದೆ ಮತ್ತು ಇದಕ್ಕಾಗಿ ಸಿಬ್ಬಂದಿಗೆ ತರಬೇತಿ ಏನಾದರು ಸರ್ಕಾರದಿಂದ ನೀಡಲಾಗಿದೆಯೇ?

## ಸರ್ಕಾರ ಪ್ರೌಢ ಶಾಲೆ/ಪದವಿ ಪೂರ್ವ ಕಾಲೇಜುಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳ ಕೊರತೆ ಇರುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೮೦ (೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ವಿಭಾಗದ ೯ ಶೈಕ್ಷಣಿಕ ಜಿಲ್ಲೆಗಳಲ್ಲಿರುವ ಸರ್ಕಾರಿ ಪದವಿ ಪೂರ್ವ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಎಲ್ಲಾ ಸಂಸ್ಥೆಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕುಡಿಯುವ ನೀರು, ಕಾಂಪೌಂಡ್, ಅಗತ್ಯವಿರುವ ಕೊಠಡಿಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ಸಾಕಷ್ಟು ಸರ್ಕಾರಿ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಮೇಲ್ಕಂಡ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಅವಶ್ಯಕತೆ ಇರುವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಉ) ಅಗತ್ಯ ಮೂಲಭೂತ ಸೌಕರ್ಯಗಳಿರದಿದ್ದಲ್ಲಿ ಸರ್ಕಾರದ ಕ್ರಮಗಳೇನು;

(ಊ) ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಯಾವುದಾದರೂ ಮೂಲಭೂತ ಸೌಕರ್ಯಗಳ ಕೊರತೆ ಇದ್ದಲ್ಲಿ ಅನುದಾನ ನಿಲ್ಲಿಸುತ್ತಿರುವುದು ನಿಜವೇ; ಹಾಗಿದ್ದರೆ ಸರ್ಕಾರದ ಶಾಲೆಗಳಿಗೆ ಒಂದು, ಅನುದಾನಿತ ಶಾಲೆಗಳಿಗೆ ಒಂದು, ಕಾನೂನು ಇದು ನ್ಯಾಯಸಮ್ಮತವೇ?

## ರಾಜ್ಯ ಸರ್ಕಾರಿ ನೌಕರರುಗಳಿಗೆ ಗಿರಿತಾಣ ಭತ್ಯೆ ನೀಡುತ್ತಿರುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೮೧ (೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ಜಿಲ್ಲೆಯ ಸರ್ಕಾರಿ ನೌಕರರುಗಳಿಗೆ ಗಿರಿತಾಣ ಭತ್ಯೆಗಳನ್ನು ನೀಡಲಾಗುತ್ತಿದೆ; ವೃಂದವಾರು ನೀಡುತ್ತಿರುವ ಭತ್ಯೆ ಎಷ್ಟು;

(ಆ) ಯಾವ ಮಾನದಂಡದ ಆಧಾರದಲ್ಲಿ ಈ ಭತ್ಯೆಯನ್ನು ನೀಡಲಾಗುತ್ತಿದೆ;

(ಇ) ರಾಜ್ಯದ ಉತ್ತರ ಕನ್ನಡ ಜಿಲ್ಲೆಯ ಜೋಯಡಾ ತಾಲ್ಲೂಕು ಅತ್ಯಂತ ಹಿಂದಳಿದ ತಾಲ್ಲೂಕಾಗಿದ್ದು, ಕಡಿಮೆ ಜನವಸತಿ ಪ್ರದೇಶವನ್ನು ಹೊಂದಿದ ತಾಲ್ಲೂಕಾಗಿರುವುದನ್ನು ಸರ್ಕಾರ ಗಮನಿಸಿದೆಯೇ;

(ಈ) ಜೋಯಡಾ ತಾಲ್ಲೂಕು ಅತೀ ದಟ್ಟ ಕಾಡು ಹಾಗೂ ಬೆಟ್ಟ ಗುಡ್ಡಗಳನ್ನು ಹೊಂದಿದ್ದರೂ ಈ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ನೌಕರರುಗಳಿಗೆ ಗಿರಿತಾಣ ಭತ್ಯೆಯನ್ನು ಮಂಜೂರು ಮಾಡದಿರಲು ಕಾರಣಗಳೇನು;

(ಉ) ಜೋಯಡಾ ತಾಲ್ಲೂಕಿನ ಸರ್ಕಾರಿ ನೌಕರರುಗಳಿಗೆ ಗಿರಿತಾಣ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ?

## ರಾಜ್ಯದಲ್ಲಿ ತುಳು ಹಾಗೂ ಕೊಂಕಣಿ ಭಾಷಾ ವಿಷಯಗಳನ್ನು ಪಠ್ಯದಲ್ಲಿ ಅಳವಡಿಸಿರುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೮೨ (೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ರಾಜ್ಯದ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ತುಳು ಹಾಗೂ ಕೊಂದಣಿ ಭಾಷಾ ವಿಷಯುಗಳನ್ನು ಪಠ್ಯದಲ್ಲಿ ಅಳವಡಿಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ತುಳು ಹಾಗೂ ಕೊಂಕಣಿ ಭಾಷಾ ಕಲಿಕೆಗೆ ಅವಕಾಶ ಕಲ್ಪಿಸಲಾಗಿದೆ;

(ಇ) ಈ ಭಾಷೆಗಳ ವಿಷಯವನ್ನು ಬೋಧಿಸುವ ಶಿಕ್ಷಕರುಗಳ ನೇಮಕಾತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಸರ್ಕಾರ ಈ ಶಿಕ್ಷಕರುಗಳಿಗೆ ನೀಡುತ್ತಿರುವ ವೇತನ ಎಷ್ಟು?

## ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಹಾಗೂ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೮೩ (೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರಗಳ ಹುದ್ದೆ ಎಷ್ಟು; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಗಳ ಸಂಖ್ಯೆ ಎಷ್ಟು;

(ಆ) ಬಹಳಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳಾದ, ಬೋಧನಾ ಕೊಠಡಿ, ಪ್ರಯೋಗಾಲಯ, ಶೌಚಾಲಯ, ಕುಡಿಯುವ ನೀರು ಹಾಗೂ ಕಾಂಪೌಂಡ್ ಗೋಡೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಈ ಅಗತ್ಯ ಸೌಕರ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಬೋಧಕೇತರ ಹುದ್ದೆಗಳಾದ, ಲಿಪಿಕ ಸಹಾಯಕರು ಹಾಗೂ ಗ್ರೂಪ್ ಡಿ ಹುದ್ದೆಗಳ ಮಂಜೂರಾತಿ ಇಲ್ಲದಿರುವ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಬಹಳಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಗ್ರೂಪ್ ಡಿ ಹುದ್ದೆಗಳಿಲ್ಲದಿರುವುದರಿಂದ ಸ್ವಚ್ಛತಾ ಕಾರ್ಯಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಲಿಪಿಕ ಸಹಾಯಕರ ಹಾಗೂ ಗ್ರೂಪ್ ಡಿ ನೌಕರರುಗಳ ಹುದ್ದೆಗಳನ್ನು ಮಂಜೂರು ಮಾಡಿ ಭರ್ತಿಗೊಳಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ?

## ಬೆಳಗಾವಿ ವಿಭಾಗದಲ್ಲಿ ನಿರ್ಮಿಸಿರುವ ಗುರುಸದನಗಳ ಮಾಹಿತಿ ನೀಡುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೮೪ (೧೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮೀಣ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಶಾಲಾ ಶಿಕ್ಷಕರುಗಳ ವಸತಿ ಸಮಸ್ಯೆಯನ್ನು ಬಗೆಹರಿಸಲು ಹೋಬಳಿ/ಗ್ರಾಮಾಂತರ ಮಟ್ಟದಲ್ಲಿ ಇಲಾಖೆ ಗುರುಸದನವನ್ನು ನಿರ್ಮಿಸಿರುವುದು ನಿಜವೇ;

(ಆ) ಗುರುಸದನವನ್ನು ಬೆಳಗಾವಿ ವಿಭಾಗಕ್ಕೊಳಪಡುವ ಜಿಲ್ಲೆಗಳ ಯಾವ ಯಾವ ಸ್ಥಳಗಳಲ್ಲಿ ನಿರ್ಮಿಸಲಾಗಿದೆ ಮತ್ತು ಇವುಗಳ ನಿರ್ಮಾಣಕ್ಕಾಗಿ ವಿನಿಯೋಗಿಸಿದ ಅನುದಾನವೆಷ್ಟು;

(ಇ) ಗುರುಸದನದಲ್ಲಿ ವಾಸಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ಗುರುಸದನ ನಿರ್ಮಾಣದಿಂದ ಗ್ರಾಮಾಂತರ ಪ್ರದೇಶದ ಶಿಕ್ಷಕರುಗಳ ವಸತಿಗೆ ಅನುಕೂಲಕರವಾಗಿರುವುದು ನಿಜವೇ;

(ಈ) ಹಾಗಿದ್ದಲ್ಲಿ, ಈ ಯೋಜನೆಯನ್ನು ಮುಂದುವರೆಸಿ ರಾಜ್ಯದ ಹಿಂದುಳಿದ ತಾಲ್ಲೂಕುಗಳ ಗ್ರಾಮೀಣ ಭಾಗಗಳಲ್ಲಿ ಗುರುಸದನವನ್ನು ನಿರ್ಮಾಣ ಮಾಡಿ ಆ ಭಾಗದ ಶಿಕ್ಷಕರಿಗೆ ವಸತಿ ಕಲ್ಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ?

## ರಾಯಚೂರು ವಾರ್ತಾ ಇಲಾಖೆಗೆ (AC) ದೊಡ್ಡ ವಾಹನ ಒದಗಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):-**

೨೮೫ (೪೩೫) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಭಾಗ ಮತ್ತು ಜಿಲ್ಲಾ ಮಟ್ಟದ ಪತ್ರಕರ್ತರಿಗೆ ಪ್ರೋತ್ಸಾಹ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ವಾರ್ತಾ ಇಲಾಖೆಗೆ ಈಗಾಗಲೇ ಆಶ್ವಾಸನೆ ನೀಡಿದಂತೆ ದೊಡ್ಡ ವಾಹನ (AC ವಾಹನ) ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

## ರಾಯಚೂರು ಜಿಲ್ಲೆಯಲ್ಲಿ ಪ್ರೌಢ ಶಾಲೆಯನ್ನು ಪ್ರಾರಂಭಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೮೬ (೪೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೩೭೧ (J) ಕಲಂ ವಿಶೇಷ ಸ್ಥಾನಮಾನದ ಅನುಗುಣವಾಗಿ ರಾಯಚೂರು ಜಿಲ್ಲೆಯಲ್ಲಿ ಶಿಕ್ಷಕರ ನೇಮಕಾತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿ ಪ್ರೌಢ ಶಾಲೆಗಳು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

## ರಾಯಚೂರು ಜಿಲ್ಲೆಗೆ ೨೦೧೫–೧೬ನೇ ಸಾಲಿನಲ್ಲಿ ಮಂಜೂರಾತಿಯಾಗಿರುವ ಮನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೮೭ (೪೩೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹೆಚ್ಚು ಜನ ಸಂಖ್ಯೆ ಹೊಂದಿರುವ ರಾಯಚೂರು ಜಿಲ್ಲೆಯ ಬಡವರಿಗೆ ಅನುಕೂಲವಾಗುವಂತೆ ವಸತಿ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು;

(ಆ) ೨೦೧೫-೧೬ನೇ ಸಾಲಿನಲ್ಲಿ ಜಿಲ್ಲೆಗೆ ಮಂಜೂರಾತಿಯಾಗಿರುವ ಮನೆಗಳ ಸಂಖ್ಯೆ ಎಷ್ಟು? (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೮೮ (೪೩೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋಧ್ಯಮ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

ಇನ್‌ವೆಸ್ಟ್ ಕರ್ನಾಟಕ ಮುಖಾಂತರ ರಾಯಚೂರು ಜಿಲ್ಲೆಯಲ್ಲಿ ನೂತನವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಸ್ಥಾಪನೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು?

## ಪಂಚಾಯತಿ ಸದಸ್ಯರಿಗೆ ಗೌರವ ಧನ ಮತ್ತು ಗುರುತಿನ ಚೀಟಿ ವಿತರಿಸುವ ಬಗ್ಗೆ

**ಶ್ರೀ ಬಸವರಾಜಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೯ (೪೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯತಿ ಜಿಲ್ಲಾ ಪಂಚಾಯತಿ ಸದಸ್ಯರಿಗೆ ನೀಡುತ್ತಿರುವ ಗೌರವಧನ ಎಷ್ಟು; ಗೌರವಧನ ಹೆಚ್ಚಿಸುವ ಬಗ್ಗೆ ಸರ್ಕಾರಕ್ಕೆ ಆಲೋಚನೆ ಇದೆಯೇ;

(ಆ) ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿ ಸದಸ್ಯರಿಗೆ ಗುರುತಿನ ಚೀಟಿ ನೀಡುವ ಆಲೋಚನೆ ಇದೆಯೇ; ಇಲ್ಲದಿದ್ದಲ್ಲಿ ಕಾರಣವೇನು?

## ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಕುಡಿಯುವ ನೀರಿನ ವ್ಯವಸ್ಥೆ

**ಶ್ರೀ ಬಸವರಾಜಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೦ (೪೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಎಷ್ಟು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ;

(ಆ) ಪ್ರಸಕ್ತ ಪ್ರಾರಂಭವಾಗುತ್ತಿರುವ ಬೇಸಿಗೆ ಕಾಲದಲ್ಲಿ ಕುಡಿಯುವ ನೀರನ್ನು ಸರಬರಾಜು ಮಾಡಲು ತೆಗೆದುಕೊಂಡ ಕ್ರಮಗಳೇನು;

(ಇ) ಎರಡು ಜಿಲ್ಲೆಗಳಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕ ಮಂಜೂರಾಗಿದೆ, ಎಷ್ಟು ಪ್ರಾರಂಭಗೊಂಡಿವೆ?

## ಸೇವಾ ಖಾಯಂಮಾತಿಯನ್ನು ಘೋಷಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೯೧ (೨೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವೃತ್ತಿಪರ ಕೋರ್ಸ್ (JOC) ನಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ವಿಲೀನಗೊಂಡಿರುವ ೧೭೫ ನೌಕರರು ೨ ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದು, ಈವರೆಗೂ ಇವರ ಸೇವಾ ಖಾಯಂಮಾತಿಯನ್ನು ಘೋಷಿಸದಿರಲು ಕಾರಣವೇನು;

(ಆ) ಈ ನೌಕರರಲ್ಲಿ ಈಗಾಗಲೇ ಕೆಲವರು ನಿಧನ ಹೊಂದಿದ್ದು ಕೆಲವರು ನಿವೃತ್ತಿ ಆಗಿ ಹಾಗೂ ಕೆಲವರು ನಿವೃತ್ತಿ ವಯಸ್ಸಿನ ಅಂಚಿನಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ನೌಕರರ ಭವಿಷ್ಯದ ಬಗ್ಗೆ ಸರ್ಕಾರ ಚಿಂತನೆ ಮಾಡಿ ಯಾವ ಕಾಲಮಿತಿಯಲ್ಲಿ ವಿಲೀನಗೊಂಡಿರುವ ನೌಕರರ ಸೇವಾ ಖಾಯಂಮಾತಿಯನ್ನು ಘೋಷಿಸಲಾಗುವುದು?

## ಗ್ರೂಪ್ 'ಸಿ' ಹಾಗೂ ಗ್ರೂಪ್ 'ಡಿ' ಹುದ್ದೆಗಳನ್ನು ಸೃಷ್ಟಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೯೨ (೨೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಎಷ್ಟು ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಗ್ರೂಪ್ 'ಸಿ' ಹಾಗೂ ಗ್ರೂಪ್ 'ಡಿ' ಹುದ್ದೆಗಳನ್ನು ಸೃಷ್ಟಿಸಲಾಗಿದೆ; (ಕಾಲೇಜುವಾರು ವಿವರ ನೀಡುವುದು)

(ಆ) ಹೀಗೆ ಸೃಷ್ಟಿಸಿದ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಹಾಗೂ ಎಷ್ಟು ಹುದ್ದೆಗಳು ಖಾಲಿ ಇವೆ;

(ಇ) ಎಷ್ಟು ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಈ ಹುದ್ದೆಗಳನ್ನು ಸೃಷ್ಟಿಸಿಲ್ಲ; (ವಿವರ ನೀಡುವುದು) ಈ ಹುದ್ದೆಗಳನ್ನು ಸೃಷ್ಟಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಈ) ಗ್ರೂಪ್ 'ಸಿ' ಹಾಗೂ ಗ್ರೂಪ್ 'ಡಿ' ಹುದ್ದೆಗಳಿಲ್ಲದ ಕಾಲೇಜುಗಳಲ್ಲಿ ಪರ್ಯಾಯವಾಗಿ ಕಾರ್ಯ ನಿರ್ವಹಿಸಲು ಯಾವ ವ್ಯವಸ್ಥೆ ಮಾಡಲಾಗಿದೆ? (ವಿವರ ನೀಡುವುದು)

## ವರ್ಗಾವಣೆಯಲ್ಲಿ ಮಾಜಿ ಸೈನಿಕರಿಗೆ ವಿಶೇಷ ಆದ್ಯತೆ ನೀಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೯೩ (೨೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕ ಉಪನ್ಯಾಸಕರ ವರ್ಗಾವಣೆಯ ಕೌನ್ಸಿಲಿಂಗ್ ನಲ್ಲಿ ಮಾಜಿ ಸೈನಿಕರಿಗೆ ಆದ್ಯತೆ ನೀಡಲಾಗಿದೆಯೇ;

(ಆ) ಮಾಜಿ ಸೈನಿಕರ ಅವಲಂಬಿತರಿಗೆ ಕೌನ್ಸಿಲಿಂಗ್ ವರ್ಗಾವಣೆಯಲ್ಲಿ ಆದ್ಯತೆ ಇರುವಾಗ ಸ್ವತಃ ಮಾಜಿ ಸೈನಿಕನಿಗೆ ವರ್ಗಾವಣೆಯಲ್ಲಿ ಆದ್ಯತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ದೇಶ ಸೇವೆಯಲ್ಲಿ ಸಾಕಷ್ಟು ವರ್ಷಗಳು ತನ್ನ ಸಂಸಾರವನ್ನು ಬಿಟ್ಟು ದೂರದ ಊರಿನಲ್ಲಿ ಸೇವೆ ಸಲ್ಲಿಸಿದ ಮಾಜಿ ಸೈನಿಕರಿಗೆ ನಂತರದ ಸೇವೆಯಲ್ಲಿ ಕನಿಷ್ಠ ಸ್ವಂತ ಜಿಲ್ಲೆಯಲ್ಲಿಯಾದರೂ ಸೇವೆ ಸಲ್ಲಿಸುವಂತಾಗಲು ಕೌನ್ಸಿಲಿಂಗ್ ವರ್ಗಾವಣೆಯಲ್ಲಿ ಆದ್ಯತೆ ಕಲ್ಪಿಸಲು ಸರ್ಕಾರ ಏನು ಕ್ರಮ ಕೈಗೊಳ್ಳುವುದು?

## ಸಮಗ್ರ ವಸತಿ ಮತ್ತು ಕೊಳಚೆ ಸುಧಾರಣೆ ಯೋಜನೆ ಕುಂಠಿತವಾಗಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೯೪ (೨೯೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಗ್ರ ವಸತಿ ಮತ್ತು ಕೊಳಚೆ ಸುಧಾರಣೆ ಯೋಜನೆಯಡಿಯಲ್ಲಿ ಕೊಳಚೆ ನಿರ್ಮೂಲನಾ ಮಂಡಳಿಯ ಮಾಹಿತಿ ಶಿಕ್ಷಣ ಹಾಗೂ ಸಂವೇದನಾ ಕಾರ್ಯಕ್ರಮದ ಅಡಿಯಲ್ಲಿ ಹಮ್ಮಿಕೊಂಡ ಕಾರ್ಯಗಳು ಮುಗಿದಿದ್ದರೂ ಈವರೆವಿಗೂ ರಾಜ್ಯ ಮಟ್ಟದ ಅಧಿಕಾರಯುಕ್ತ ಸಮಿತಿ ಸಭೆ ಮಾಡದಿರಲು ಕಾರಣವೇನು;

(ಆ) ಕಳೆದ ಡಿಸೆಂಬರ್ ೨೦೧೪ ರಂದು ಸ್ವಯಂ ಸೇವಾ ಸಂಸ್ಥೆಗಳು (NGO) ಕಾರ್ಯಕ್ರಮವನ್ನು ಅನುಷ್ಠಾನ ಮಾಡಿ ಕೊನೆಯ ವರದಿಯನ್ನು ಸಲ್ಲಿಸಿದ್ದರೂ ಈವರಗೆ ಅವರಿಗೆ ಬರಬೇಕಾದ ಬಾಕಿ ಹಣವನ್ನು ಪಾವತಿ ಮಾಡದಿರಲು ಕಾರಣವೇನು;

(ಇ) ಸರ್ಕಾರದಿಂದ ಬಿಡುಗಡೆ ಮಾಡಿರುವ ಹಣ ಖರ್ಚು ಮಾಡದೇ ಇರುವುದನ್ನು ಮಾಹಾಲೇಖಪಾಲರ ವರದಿಯಲ್ಲಿ ಉಲ್ಲೇಖಿಸಿರುವುದರ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

## K.S.T.D.C. ಟ್ಯಾಕ್ಸಿ ಸೇವೆಯ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೯೫ (೪೧೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (KSTDC) ವತಿಯಿಂದ ಬೆಂಗಳೂರಿನ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪೋಸ್ಟ್‌ಪೆಯಿಡ್ ಟ್ಯಾಕ್ಸಿ ಸೇವೆ ನಿರ್ವಹಿಸುತ್ತಿರುವುದು ನಿಜವೇ; ಹಾಗಾದರೆ, KSTDC ಮತ್ತು BIAL ನಡುವೆ ಆಗಿರುವ ಒಪ್ಪಂದದ ಕಾರರುಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ನಿಗಮವು ಟ್ಯಾಕ್ಸಿ ಮಾಲೀಕರಿಂದ ಪಾರ್ಕಿಂಗ್ ಚಾರ್ಜ್, ಕಾಲ್‌ಸೆಂಟರ್ ಚಾರ್ಜ್, ಮತ್ತು ಸೇವಾ ಚಾರ್ಜ್‌ಗಳನ್ನು ಮನಸೋ ಇಚ್ಛೆ ವಸೂಲಿ ಮಾಡುತ್ತಿರುವುದು ನಿಜವೇ; ಹಾಗಾದರೆ ೧ ತಿಂಗಳಿಗೆ ಎಷ್ಟು ವಸೂಲಿ ಮಾಡುತ್ತಿದ್ದಾರೆ; ಹಾಲಿ ಎಷ್ಟು ಟ್ಯಾಕ್ಸಿಗಳು ಕಾರ್ಯಾಚರಣೆಯಲ್ಲಿ ಇವೆ; (ವಿವರವಾದ ಮಾಹಿತಿ ನೀಡುವುದು)

(ಇ) ೨೦೧೫–೧೬ನೇ ಸಾಲಿನಲ್ಲಿ ಸರ್ಕಾರದಿಂದ ಹೊಸದಾಗಿ ಯಾವ ಸಂಘಕ್ಕೆ ಎಷ್ಟು ಟ್ಯಾಕ್ಸಿಗಳಿಗೆ ನಿಗಮದ (KSTDC) ವತಿಯಿಂದ ಕಾರ್ಯಾಚರಣೆಗೊಳಿಸಲು ಅನುಮತಿ ನೀಡಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಈ) ನಿಗಮವು ಲಕ್ಷಾಂತರ ರೂಪಾಯಿಗಳ ಕಾಲ್‌ಸೆಂಟರ್ ಚಾರ್ಜನ್ನು ವಸೂಲಿ ಮಾಡುತ್ತಿದ್ದು ಟ್ಯಾಕ್ಸಿ ಚಾಲಕರಿಗೆ ಇಲ್ಲಿಯವರೆಗೆ ಎಷ್ಟು ರಿಟರ್ನ್ ಬಾಡಿಗೆಗಳನ್ನು ನೀಡಲಾಗಿದೆ? (ವಿವರವಾಗಿ ತಿಂಗಳವಾರು ಮಾಹಿತಿ ನೀಡುವುದು)

## ವಿ.ಟಿ.ಪಿ.ಸಿ. ಕೇಂದ್ರದ ಕಚೇರಿ ಸ್ಥಳಾಂತರ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೯೬ (೪೧೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ (ವಿ.ಟಿ.ಪಿ.ಸಿ) ಕೇಂದ್ರದ ಕೇಂದ್ರ ಕಚೇರಿಯನ್ನು ಕಸ್ತೂರಿ ಬಾ ರಸ್ತೆಯ ಸ್ವಂತ ಕಟ್ಟಡದಿಂದ ಬಿ.ಎಂ.ಟಿ.ಸಿ. (ಶಾಂತಿ ನಗರದ) ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸಿದ್ದು ಯಾವಾಗ; ಸ್ಥಳಾಂತರಿಸಲು ಕಾರಣಗಳೇನು; (ವಿವರವಾದ ಮಾಹಿತಿ ಕೊಡುವುದು)

(ಆ) ಕೇಂದ್ರ ಕಛೇರಿಯ ಮಾಸಿಕ ಬಾಡಿಗೆ ಎಷ್ಟು; ಎಷ್ಟು ಮುಂಗಡ ಹಣ ನೀಡಲಾಗಿದೆ;

(ಇ) ಹಾಲಿ ಇರುವ ಕೇಂದ್ರ ಕಚೇರಿ ಒಳಾಂಗಣ ವಿನ್ಯಾಸಕ್ಕೆ ಖರ್ಚು ಮಾಡಿದ ಹಣ ಎಷ್ಟು; (ವಿವರವಾಗಿ ಸಾಮಗ್ರಿಗಳವಾರು ಮಾಹಿತಿ ಒದಗಿಸುವುದು)

(ಈ) ಈ ಕೆಲಸಕ್ಕೆ ಟೆಂಡರ್ ಕರೆಯಲಾಗಿದೆಯೇ; ಇಲ್ಲವಾದಲ್ಲಿ ಯಾವ ರೀತಿ ಕೆಲಸ ನಿರ್ವಹಿಸಲಾಗಿದೆ (ವಿವರವಾಗಿ ಮಾಹಿತಿ ಕೊಡುವುದು)

(ಉ) ಕಸ್ತೂರಿ ಬಾ ರಸ್ತೆಯ ಸ್ವಂತ ಕಟ್ಟಡದಲ್ಲಿ ಕಚೇರಿ ಇದ್ದರೆ ವಿ.ಟಿ.ಪಿಸಿ ಕೇಂದ್ರಕ್ಕೆ ಲಕ್ಷಾಂತರ ರೂ. ಗಳು ಉಳಿತಾಯವಾಗುತ್ತಿರಲಿಲ್ಲವೇ;

(ಊ) ಒಳಾಂಗಣ ವಿನ್ಯಾಸದ ಕಾಮಗಾರಿಯಲ್ಲಿ ಅವ್ಯವಹಾರ ನಡೆದಿರುವುದು ನಿಜವೇ?

## ವೈದ್ಯಕೀಯ ವೆಚ್ಚ ಮರುಪಾವತಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೯೭ (೪೧೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಬಿ.ಇ.ಓ. ಮತ್ತು ಡಿ.ಡಿ.ಪಿ.ಐ. ಕಛೇರಿಗಳಲ್ಲಿ ಪಾವತಿಯಾಗದೇ ಉಳಿದಿರುವ ವೈದ್ಯಕೀಯ ವೆಚ್ಚ ಮರುಪಾವತಿ ಬಿಲ್ಲುಗಳ ಸಂಖ್ಯೆ ಎಷ್ಟು;

(ಆ) ಎಷ್ಟು ವರ್ಷದಿಂದ ಬಾಕಿ ಇವೆ; ಬಾಕಿ ಇರುವ ಬಿಲ್ಲುಗಳ ಒಟ್ಟು ಮೊತ್ತವೆಷ್ಟು; ಪಾವತಿಯಾಗದೇ ಇರಲು ಕಾರಣಗಳೇನು;

(ಇ) ಬಿಲ್ಲುಗಳು ಪಾವತಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ವಿಳಂಬಕ್ಕೆ ಕಾರಣರಾದವರ ಮೇಲೆ ಏನಾದರೂ ಕ್ರಮ ತೆಗೆದುಕೊಳ್ಳಲಾಗಿದೆಯೇ;

(ಈ) ಸರ್ಕಾರ ಬಿಲ್ಲುಗಳನ್ನು ಪಾವತಿಸುವ ಬಗ್ಗೆ ಕ್ರಮ ತೆಗೆದುಕೊಳ್ಳುವುದೇ?

## ನೀರು ಮತ್ತು ನೈರ್ಮಲ್ಯ ಇಲಾಖೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಮುಂದುವರೆಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೯೮ (೪೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನೀರು ಮತ್ತು ನೈರ್ಮಲ್ಯ ಇಲಾಖೆ ಅಧೀನದಲ್ಲಿ ಕೆಲಸ ನಿರ್ವಹಿಸುತ್ತಿದ್ದ ರಾಜ್ಯದ ೮೦೫ ಗ್ರಾಮೀಣ ಪದವೀಧರರ ಸೇವೆಯನ್ನು ಮಾನ್ಯ ಉಚ್ಚನ್ಯಾಯಾಲಯದ ಆದೇಶದಂತೆ ಮುಂದುವರೆಸುವ ಸಂಬಂಧ ಮಾನ್ಯ ಸಚಿವರು ಕಡತ ಮಂಡಿಸುವಂತೆ ಸೂಚಿಸಿರುವುದು ನಿಜವೇ;

(ಆ) ಯಾವ ದಿನಾಂಕದಂದು ಸೂಚ್ಯಾದೇಶ ನೀಡಲಾಗಿದೆ; ಇದಕ್ಕೆ ಸಂಬಂಧಿಸಿದ ಕಡತ ಯಾವ ಹಂತದಲ್ಲಿದೆ;

(ಇ) ಸೂಚ್ಯಾದೇಶ ನೀಡಿ ೨ ವರ್ಷ ಕಳೆದರೂ ಕಡತ ಸರ್ಕಾರದ ಗಮನಕ್ಕೆ ಬರದೇ ಇರಲು ಕಾರಣಗಳೇನು? (ವಿವರವಾದ ಮಾಹಿತಿ ನೀಡುವುದು)

## ಜಲವಿದ್ಯುತ್ ಉತ್ಪಾದನೆ ಸಂಬಂಧಿಸಿದ M.O.U. ವಿವರ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೯ (೪೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫ನೇ ಸಾಲಿನ ಪ್ರವಾಸಿ ಭಾರತ ದಿವಸ್ ಕಾರ್ಯಕ್ರಮದ ಗುಜರಾತ್ ರಾಜ್ಯದ ಅಹಮದಾಬಾದ್ ನಗರದಲ್ಲಿ ನಡೆದ ರೋಡ್ ಶೋನಲ್ಲಿ ೧೦ ಸಾವಿರ ಮೆಗಾವ್ಯಾಟ್ ಜಲವಿದ್ಯುತ್ ಉತ್ಪಾದನೆ ಸಂಬಂಧ ತಿಳುವಳಿಕೆ ಒಪ್ಪಂದ (M.O.U) ಮಾಡಿಕೊಂಡಿರುವುದು ನಿಜವೇ; (ವಿವರವಾದ ಮಾಹಿತಿ ನೀಡುವುದು)

(ಆ) ಕರ್ನಾಟಕ ರಾಜ್ಯದ ಯಾವ ಪ್ರದೇಶದಲ್ಲಿ ೧೦ ಸಾವಿರ ಮೆಗಾವ್ಯಾಟ್ ಜಲವಿದ್ಯುತ್ ಉತ್ಪಾದನೆ ಮಾಡಬಹುದಾಗಿದೆ; (ವಿವರವಾಗಿ ಸ್ಥಳದ ಡಿ.ಪಿ.ಆರ್. ನೊಂದಿಗೆ ಮಾಹಿತಿ ನೀಡುವುದು)

(ಇ) ಇದರ ಸಂಬಂಧ ಯಾವ ಸಂಸ್ಥೆಗಳು ಮುಂದೆ ಬಂದಿವೆ;

(ಈ) ೧೦ ಸಾವಿರ ಮೆಗಾವ್ಯಾಟ್ ಜಲವಿದ್ಯುತ್ ಉತ್ಪಾದನೆ ಮಾಡುವ ಅವಕಾಶವಿದ್ದರೆ ಸರ್ಕಾರ/ಕರ್ನಾಟಕ ವಿದ್ಯುತ್ ನಿಗಮ ಇಲ್ಲಿಯವರೆಗೆ ಏಕೆ ಕಾರ್ಯೋನ್ಮುಖವಾಗಿರುವುದಿಲ್ಲ?

## ಸರ್ಕಾರಿ ಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦ (೪೪೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು ಮತ್ತು ಶೌಚಾಲಯಗಳ ಸಮರ್ಪಕ ವ್ಯವಸ್ಥೆ ಇಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಸಂಪೂರ್ಣವಾಗಿ ಎಲ್ಲಾ ಕಡೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯ ವ್ಯವಸ್ಥೆಯನ್ನು ಮಾಡಲಾಗುವುದು ಯಾವಾಗ?

## ಸ್ಥಳೀಯ ಸಂಸ್ಥೆಗಳ ಸದಸ್ಯರಿಗೆ ಗೌರವಧನ, ಭತ್ಯೆಗೆ ಅನುದಾನ ನೀಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧ (೪೪೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಮುಂತಾದ ಸ್ಥಳೀಯ ಸಂಸ್ಥೆಗಳ ಸದಸ್ಯರುಗಳಿಗೆ ಗೌರವಧನ ಮತ್ತು ಭತ್ಯೆಗಳನ್ನು ನೀಡಲು ಅನುದಾನವನ್ನು ಬಿಡುಗಡೆ ಮಾಡದಿರಲು ಕಾರಣವೇನು;

(ಆ) ಅನುದಾನವನ್ನು ಎಷ್ಟು ದಿನಗಳೊಳಗಾಗಿ ಬಿಡುಗಡೆ ಮಾಡಲಾಗುವುದು;

(ಇ) ಈ ಬಗ್ಗೆ ಶೀಘ್ರವಾಗಿ ಆದೇಶ ಹೊರಡಿಸಲಾಗುವುದೇ?

## ಹಾಸನ ಜಿಲ್ಲೆ ವಸತಿ ಯೋಜನೆ ವಿವರಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨ (೪೪೫) ಮಾನ್ಯ ವಸತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಯಡಿ ವಿವಿಧ ವರ್ಗಗಳಿಗೆ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು? (೨೦೧೨–೧೩ ರಿಂದ ೨೦೧೫–೧೬ನೇ ಸಾಲಿನ ವಿವರಗಳನ್ನು ಒದಗಿಸುವುದು)

## ಕುಮಾರ ನಾಯಕ್ ವರದಿ ಕುರಿತು

**ಶ್ರೀಮತಿ ತಾರಾ ಅನುರಾಧ (ನಾಮ ನಿರ್ದೇಶನ ಹೊಂದಿದವರು):–**

೩೦೩ (೩೭೭+೩೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರೌಢಶಾಲಾ ಶಿಕ್ಷಕರ ಹಾಗೂ ಪದವಿ ಪೂರ್ವ ಉಪನ್ಯಾಸಕರ ವೇತನ ತಾರತಮ್ಯದ ಕುರಿತು "ಕುಮಾರ ನಾಯಕ್ ವರದಿ" ಮುಖ್ಯ ಅಂಶಗಳೇನು;

(ಆ) ಇವರ ವೇತನ ತಾರತಮ್ಯ ಸರಿಪಡಿಸಲು ವಾರ್ಷಿಕ ಅಂದಾಜು ಎಷ್ಟು ಹಣಕಾಸಿನ ಅವಶ್ಯಕತೆ ಇದೆ;

(ಇ) ಸಮಸ್ಯೆ ಪರಿಹರಿಸದಿದ್ದರೆ ಎಸ್.ಎಸ್.ಎಲ್.ಸಿ. ಹಾಗೂ ಪಿ.ಯು. ಮೌಲ್ಯಮಾಪನದ ಬಹಿಷ್ಕಾರದ ಕರೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ವಿದ್ಯಾರ್ಥಿಗಳು ಹಾಗೂ ಪಾಲಕರ ಆತಂಕ ನಿವಾರಣೆ ದೃಷ್ಟಿಯಿಂದ ತಕ್ಷಣ ಈ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಮುಂದಾಗುವುದೇ; ಒಟ್ಟು ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರದ ಕ್ರಮವೇನು?

## ಕರಾವಳಿ ಪ್ರದೇಶದಲ್ಲಿ ಮರಳುಗಾರಿಕೆಯನ್ನು ನಿಲ್ಲಿಸಿರುವುದರ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೩೦೪ (೩೮೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಪ್ರದೇಶಲ್ಲಿ ಮರಳುಗಾರಿಕೆಯನ್ನು ನಿಲ್ಲಿಸಿರುವುದರಿಂದ ಕಟ್ಟಡ ಕಾಮಗಾರಿಗೆ ಮರಳು ದೊರಕದೇ ತೊಂದರೆ ಉಂಟಾಗುತ್ತಿರುವುದಕ್ಕೆ ಇಲಾಖೆ ಕೈಗೊಂಡ ಕ್ರಮಗಳೇನು;

(ಆ) ರಾಜ್ಯದಲ್ಲಿ ಮರಳುಗಾರಿಕೆಗಾಗಿ ನೀತಿಯನ್ನು ರಚಿಸಲಾಗಿದೆಯೇ; ಇದ್ದಲ್ಲಿ, ವಿವರ ಒದಗಿಸುವುದು; ಇಲ್ಲದಿದ್ದಲ್ಲಿ, ಸರ್ಕಾರದ ಮುಂದಿರುವ ಪ್ರಸ್ತಾವನೆಗಳೇನು;

(ಇ) ಮರಳುಗಾರಿಕೆಯನ್ನು ನಿಯತಕಾಲಿಕವಾಗಿ ನಡೆಸಲು ಸರ್ಕಾರದ ಮುಂದಿರುವ ತೊಂದರೆಗಳೇನು; ಮರಳು ಸಾಗಾಟಕ್ಕೆ ಮತ್ತು ಮರಳುಗಾರಿಕೆಗಾಗಿ ಯಾವ ಅರ್ಹತೆ ಮೇಲೆ ಪರವಾನಿಗೆ ನೀಡಲಾಗಿದೆ;

(ಈ) ರಾಜ್ಯದಲ್ಲಿ, ಎಷ್ಟು ಬಗೆಯ ಪರವಾನಿಗೆಗಳನ್ನು ಮರಳುಗಾರಿಕೆಗಾಗಿ ಸಾಗಾಟ ಮಾಡಲು ನೀಡಲಾಗಿದೆ; ಇದರಿಂದ ಸಂಗ್ರಹವಾದ ತೆರಿಗೆ ಎಷ್ಟು? (ವಿವರ ಒದಗಿಸುವುದು)

## ಮಂಗಳೂರು ವಿಮಾನ ನಿಲ್ದಾಣ ರನ್‌ವೇ ವಿಸ್ತರಣೆ ಕಾಮಗಾರಿಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೩೦೫ (೩೬೨) ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆ ಕಾಮಗಾರಿ ವಿಳಂಬಗೊಳ್ಳಲು ಕಾರಣಗಳೇನು; ಪ್ರಸ್ತುತ ಎಷ್ಟು ಮೀಟರ್ ರನ್‌ವೇ ವಿಸ್ತರಣೆ ಪ್ರಸ್ತಾವನೆ ಇಲಾಖೆ ಮುಂದಿದೆ; (ವಿವರ ನೀಡುವುದು)

(ಆ) ರನ್‌ವೇ ವಿಸ್ತರಣೆಗೆ ಬೇಕಾಗಿರುವ ಭೂಮಿ ಎಷ್ಟು; (ವಿವರ ನೀಡುವುದು) ಭೂಸ್ವಾಧೀನ ಪಡಿಸಿಕೊಳ್ಳಲು ಇಲಾಖೆ ಕೈಗೊಂಡಿರುವ ಕ್ರಮವೇನು; ತಗಲುವ ಖರ್ಚು ಎಷ್ಟು; (ವಿವರ ನೀಡುವುದು)

(ಇ) ಮಂಗಳೂರು ವಿಮಾನ ನಿಲ್ದಾಣದ ರನ್‌ವೇನಲ್ಲಿ ಅಂತರರಾಷ್ಟ್ರೀಯ ಮಟ್ಟದ ವಿಮಾನಗಳು ಹಾರಾಟ ನಡೆಸಲು ಸಾಧ್ಯವಾಗದೇ ಇರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಪ್ರಯಾಣಿಕರ ಸಂಖ್ಯೆ ಕುಸಿಯುತ್ತಿರುವ ವಿಷಯದ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ವಿಮಾನ ನಿಲ್ದಾಣದ ನಿರ್ಗಮನ ರಸ್ತೆಯನ್ನು ಸಾರ್ವಜನಿಕ ಉಪಯೋಗಕ್ಕೆ ಇನ್ನೂ ಬಿಟ್ಟು ಕೊಡದಿರುವುದಕ್ಕೆ ಕಾರಣಗಳೇನು? (ವಿವರ ನೀಡುವುದು)

## ಕರಾವಳಿ ಪ್ರದೇಶದಲ್ಲಿ ಪ್ರವಾಸೋದ್ಯಮ ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೩೦೬ (೩೯೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಪ್ರದೇಶದಲ್ಲಿ ಪ್ರವಾಸೋದ್ಯಮವನ್ನು ಪ್ರೋತ್ಸಾಹಿಸಲು ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳಾವುವು; ಸದರಿ ಯೋಜನೆಗಳನ್ನು ಅನುಷ್ಠಾನಕ್ಕೆ ತರಲು ಕೈಗೊಂಡಿರುವ ಕ್ರಮಗಳಾವುವು; (ವಿವರ ಒದಗಿಸುವುದು)

(ಆ) CRZ ನಿಯಮವನ್ನು ಸರಳೀಕರಣಗೊಳಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು;

(ಇ) ಕರಾವಳಿ ಪ್ರದೇಶದ ಬೀಚುಗಳ ಅಭಿವೃದ್ಧಿಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)

(ಈ) ಕರಾವಳಿ ಅಭಿವೃದ್ಧಿ ಪ್ರಾಧಿಕಾರದಿಂದ ಪ್ರವಾಸೋದ್ಯಮ ಇಲಾಖೆಗೆ ಎಷ್ಟು ಹಣ ಮೀಸಲಿಡಲಾಗಿದೆ ಮತ್ತು ಕರಾವಳಿ ಅಭಿವೃದ್ಧಿ ಪ್ರಾಧಿಕಾರದಿಂದ ಪ್ರವಾಸೋದ್ಯಮಕ್ಕೆ ಹಮ್ಮಿಕೊಂಡಿರುವ ಯೋಜನೆಗಳಾವುವು? (ವಿವರ ನೀಡುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುಮತಿ ರಹಿತ ಶಾಲೆಗಳ ಸಂಖ್ಯೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೩೦೭ (೩೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುಮತಿ ರಹಿತ ಶಾಲೆಗಳ ಸಂಖ್ಯೆ ಎಷ್ಟು; ಈ ಶಾಲೆಗಳಿಗೆ ಮಾನ್ಯತೆ ನೀಡಲು ಇಲಾಖೆ ಮುಂದಿರುವ ಪ್ರಸ್ತಾವನೆಗಳಾವುವು;

(ಆ) ಮಾನ್ಯತೆ ಪಡೆಯದೇ ಕಾರ್ಯ ನಿರ್ವಹಿಸುತ್ತಿರುವ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಎಷ್ಟು ವರ್ಷಗಳಿಂದ ಮಾನ್ಯತೆ ಪಡೆಯದೇ ಶಿಕ್ಷಣ ನೀಡಲಾಗುತ್ತಿದೆ;

(ಇ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳು ಮತ್ತು ಅನುದಾನಿತ ಶಾಲೆಗಳು ಮತ್ತು ಖಾಸಗಿ ಶಾಲೆಗಳ ಸಂಖ್ಯೆ ಎಷ್ಟು; ಈ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಈ) ರಾಜ್ಯದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆ ಎಷ್ಟು ಸದರಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು; ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ? (ವಿವರ ಒದಗಿಸುವುದು)

## ಗ್ರಾಮ ಪಂಚಾಯತಿವಾರು ಮನೆಗಳನ್ನು ವಿತರಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೮ (೨೯೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಗ್ರಾಮೀಣ ಪ್ರದೇಶದ ಕಡು ಬಡವರಿಗೆ ಎಷ್ಟು ಮನೆಗಳನ್ನು ವಿತರಿಸುವ ಉದ್ದೇಶ ಸರ್ಕಾರಕ್ಕೆ ಇದೆ;

(ಆ) ಗ್ರಾಮ ಪಂಚಾಯಿತಿವಾರು ಮನೆಗಳನ್ನು ವಿತರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

## ನಮೂನೆ ೯ ಮತ್ತು ೧೧ರ ಕಠಿಣ ನಿಯಮಾವಳಿ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೯ (೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ನೀಡುವ ಕರ ನಿರ್ಧರಣ ಪಟ್ಟಿ ವಿತರಿಸುವ ಸಂಬಂಧ ನಮೂನೆ ೯ & ೧೧ಎ, ೧೧ಬಿ ಬಗ್ಗೆ ಇರುವ ನಿಯಮಗಳೇನು; ಈ ಬಗ್ಗೆ ಕಳೆದ ೨ ವರ್ಷಗಳಲ್ಲಿ ಹೊರಡಿಸಿರುವ ಆದೇಶ, ಸುತ್ತೋಲೆ, ಮಾರ್ಗಸೂಚಿಗಳ ಪ್ರತಿ ಒದಗಿಸುವುದು;

(ಆ) ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಸದರಿ ನಿಯಮಾವಳಿಗಳಿಂದ ವಿನಾಯಿತಿ ಇದೆಯೇ; (ವಿವರ ಒದಗಿಸುವುದು)

(ಇ) ಇ–ಸ್ವತ್ತು ತಂತ್ರಾಂಶದಿಂದ ವಿನಾಯಿತಿ ನೀಡಿ ಸರ್ಕಾರ ಆದೇಶ ಹೊರಡಿಸಿದ್ದರೂ ಈ ಎರಡೂ ಜಿಲ್ಲೆಗಳ ಉಪನೋಂದಣಾಧಿಕಾರಿಗಳ ಕಛೇರಿಗಳಲ್ಲಿ ನೋಂದಣಿ ಜಾಗಗಳ ಮಾರಾಟದ ನೋಂದಣಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಭೂ ಕಂದಾಯ ಅಧಿನಿಯಮದಲ್ಲಿ ಕರಾವಳಿಯ ಆವಳೀ ಜಿಲ್ಲೆಗಳಾದ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಿಗೆ ವಿಶೇಷ ವಿನಾಯಿತಿ ನೀಡಿದಂತೆ ನಮೂನೆ ೯ ಮತ್ತು ೧೧ ವಿತರಿಸುವಾಗ ನಿಯಮಾವಳಿಗಳಿಂದ ವಿನಾಯಿತಿ ನೀಡುವ ಬಗ್ಗೆ ಸರ್ಕಾರದ ನಿಲುವೇನು; ಈ ಬಗೆಗಿನ ಗೊಂದಲಗಳನ್ನು ಪರಿಹರಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಕುಡಿಯುವ ನೀರಿನ ಯೋಜನೆಗಳ ವಿವರ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೦ (೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಮಂಜೂರಾದ ಯೋಜನೆಗಳಾವುವು; ಅವುಗಳ ಅಂದಾಜು ಮೊತ್ತವೆಷ್ಟು;

(ಆ) ಕಳೆದ ೩ ವರ್ಷಗಳಲ್ಲಿ ವಿವಿಧ ಕುಡಿಯುವ ನೀರಿನ ಯೋಜನೆಗಳಿಗೆ ಸರ್ಕಾರದಿಂದ ಮಂಜೂರಾದ, ಬಿಡುಗಡೆಯಾದ, ಖರ್ಚಾದ ಮತ್ತು ಖರ್ಚಾಗದೇ ಹಿಂದಿರುಗಿಸಿದ ಮೊತ್ತವೆಷ್ಟು; (ವರ್ಷವಾರು ವಿವರ ಒದಗಿಸುವುದು)

(ಇ) ೨೦೧೫-೧೬ನೇ ಸಾಲಿನ ಉಡುಪಿ ಜಿಲ್ಲೆಯ ವಿವಿಧ ಕುಡಿಯುವ ನೀರಿನ ಯೋಜನೆಗಳು ಯಾವುವು; (ಕಾಮಗಾರಿವಾರು ಪ್ರಗತಿಯ ವಿವರ ಒದಗಿಸುವುದು)

(ಈ) ಕುಡಿಯುವ ನೀರಿನ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮತ್ತು ಲೋಪಕ್ಕೆ ಕಾರಣವಾಗುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ಒದಗಿಸುವುದು)

## ಗ್ರಾಮ ಪಂಚಾಯತ್ ಸಿಬ್ಬಂದಿಗಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೧೧ (೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕರ ವಸೂಲಿಗಾರ, ಗುಮಾಸ್ತ, ಪಂಪು ಚಾಲಕ, ಕಂಪ್ಯೂಟರ್ ಆಪರೇಟರ್, ಅಟೆಂಡರ್ ಮತ್ತು ಜಾಡಮಾಲಿ ಮತ್ತು ಇತರ ನೌಕರರ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ಹುದ್ದೆವಾರು ವಿವರ ನೀಡುವುದು)

(ಆ) ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಪ್ರಸಕ್ತವಿರುವ ವೇತನವೆಷ್ಟು ಮತ್ತು ಇತರ ಸೌಲಭ್ಯಗಳೇನು;

(ಇ) ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನವು ಅತೀ ಕಡಿಮೆಯಾಗಿರುವುದು ಮತ್ತು ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಇ.ಎಸ್.ಐ. ಪಿ.ಎಫ್. ಮತ್ತು ಇತರ ಜೀವನ ಭದ್ರತೆ ಸೌಲಭ್ಯಗಳು ಇನ್ನೂ ಒದಗಿಸದೇ ಇರುವುದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಈ) ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ವೇತನ ಹೆಚ್ಚಳವೂ ಸೇರಿದಂತೆ, ಸೇವಾ ಜೇಷ್ಠತೆಯ ಆಧಾರದ ಮೇಲೆ ವೇತನ ಶ್ರೇಣಿ, ಇ.ಎಸ್.ಐ. ಪಿಎಫ್. ಮತ್ತು ಇತರೆ ಜೀವನ ಭದ್ರತೆ ಸೌಲಭ್ಯಗಳನ್ನು ಇನ್ನೂ ಒದಗಿಸದೇ ಇರುವುದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; ಈ ಬಗ್ಗೆ ಸರ್ಕಾರದ ನಿಲುವೇನು?

## ಬಹುಗ್ರಾಮ ಕುಡಿಯುವ ನೀರಿನ ಯೋಜನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೨ (೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಉಡುಪಿ ತಾಲ್ಲೂಕಿನ ಚಾಂತಾರು, ಅಗ್ರಹಾರ ಬಡಾಪೇಟೆ, ದೇವಬೈಲು ದೇವಸ್ಥಾನಬೆಟ್ಟು, ಕೊಳಂಜೆ, ಸೂರ್‌ಬೆಟ್ಟು, ಮುಂಡಾಜೆ, ಹೇರೂರು, ತೆಂಕಬೆಟ್ಟು, ಹೇರಂಜೆ ಮತ್ತು ಉಳಿದ ಗ್ರಾಮ ಪಂಚಾಯತ್‌ಗಳಿಗೆ ಕುಡಿಯುವ ನೀರು ಒದಗಿಸುವ ಬಹು ಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ ಯಾವ ಹಂತದಲ್ಲಿದೆ;

(ಆ) ಸದರಿ ಯೋಜನೆಯ ಅಂದಾಜು ವೆಚ್ಚ ಎಷ್ಟು; ಸದರಿ ಯೋಜನೆಯ ವಿಳಂಬಕ್ಕೆ ಇರುವ ಕಾರಣಗಳೇನು;

(ಇ) ಉಡುಪಿ ಜಿಲ್ಲೆಯ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ತುರ್ತಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಿದೆ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ವಸೂಲಾದ ರಾಜಧನದ ಶೇ. ೨೫ರಷ್ಟನ್ನು ಗ್ರಾಮಪಂಚಾಯತ್‌ಗಳಿಗೆ ಹಂಚಿಕೆ ಮಾಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೩ (೭೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಕರಾವಳಿ ನಿಯಂತ್ರಣ ವಲಯದಲ್ಲಿ ತೆರವುಗೊಳಿಸುವ ಮರಳು ದಿಬ್ಬಗಳಿಂದ ಮರಳನ್ನು ವಿಲೇ ಮಾಡುವಾಗ ಸಂಗ್ರಹಿಸಿದ ರಾಜಧನದ ಮೊತ್ತವೆಷ್ಟು; (ಜಿಲ್ಲಾವಾರು–ವರ್ಷವಾರು ಮಾಹಿತಿ ಒದಗಿಸುವುದು)

(ಆ) ವಸೂಲಿ ಮಾಡಿದ ರಾಜಧನದಲ್ಲಿ ಶೇ. ೨೫ ರಷ್ಟು ಮೊತ್ತವನ್ನು ಸಂಬಂಧಪಟ್ಟ ಗ್ರಾಮ ಪಂಚಾಯತ್‌ಗಳಿಗೆ ಹಂಚಿಕೆ ಮಾಡುವ ಸಂಬಂಧ ಸುತ್ತೋಲೆ ಹೊರಡಿಸಲಾಗಿದೆಯೇ; (ಹೌದಾದಲ್ಲಿ, ಪ್ರತಿ ಒದಗಿಸುವುದು)

(ಇ) ಹಂಚಿಕೆ ಮಾಡಲಾದ ಮೊತ್ತ ಎಷ್ಟು; (ವಿವರ ಒದಗಿಸುವುದು)

(ಈ) ಸಂಪೂರ್ಣವಾಗಿ ಹಂಚಿಕೆ ಮಾಡದಿದ್ದಲ್ಲಿ, ಅದಕ್ಕೆ ಕಾರಣಗಳೇನು; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಉದ್ಯೋಗ ಖಾತ್ರಿ ತಂತ್ರಾಂಶವನ್ನು MMS ವ್ಯಾಪ್ತಿಗೆ ತರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೪ (೩೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ ದೇಶದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಉದ್ಯೋಗ ಖಾತ್ರಿ ತಂತ್ರಾಂಶವನ್ನು ಮೊಬೈಲ್ ಮೇಲ್ವಿಚಾರಣಾ ವ್ಯವಸ್ಥೆ (MMS Mobile Monitoring System) ವ್ಯಾಪ್ತಿಗೆ ತರಲು ಮುಂದಾಗಿದ್ದು, ಈ ಕುರಿತು ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಈ ವ್ಯವಸ್ಥೆಯನ್ನು ರಾಜ್ಯದಲ್ಲಿ ಜಾರಿಗೆ ತರಲು ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ;

(ಇ) ರಾಜ್ಯದಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಈ ವ್ಯವಸ್ಥೆಯನ್ನು ಜಾರಿಗೆ ತರಲು ನಿರ್ಧರಿಸಲಾಗಿದೆ ; ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಎಂ.ಎಂ.ಎಸ್. ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯತ್‌ಗಳ ಆಯ್ಕೆಯನ್ನು ಯಾವ ರೀತಿ ಮಾಡಲಾಗುತ್ತದೆ ; ಸದರಿ ಆಯ್ಕೆಯಾದ ಗ್ರಾಮಗಳಿಗೆ ಈ ವ್ಯವಸ್ಥೆಯನ್ನು ಸಂಪೂರ್ಣವಾಗಿ ಅಳವಡಿಸಿಕೊಳ್ಳಲು ಇರುವ ಮಾನದಂಡಗಳೇನು ;

(ಉ) ಈ ಎಂ.ಎಂ.ಎಸ್. ಬಳಕೆಯಿಂದ ಆಗುವ ಅನುಕೂಲಗಳು ಯಾವುವು ಮತ್ತು ಇದು ಯಾವ ರೀತಿ ಕಾರ್ಯನಿರ್ವಹಿಸುತ್ತದೆ ಎಂಬ ಬಗ್ಗೆ ವಿವರ ಒದಗಿಸುವುದು ?

## ಬೆಳ್ಳಿ ಪಾರ್ಕ್ ನಿರ್ಮಿಸುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೧೫ (೩೦೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ, ಚಿಕ್ಕೋಡಿಯ ಮಾಂಗೂರಿನಲ್ಲಿ "ಬೆಳ್ಳಿ ಪಾರ್ಕ್" ನಿರ್ಮಿಸುತ್ತಿದ್ದು ನಿಜವೇ ; ಇದ್ದಲ್ಲಿ, ಸದರಿ ಬೆಳ್ಳಿ ಪಾರ್ಕ್ ನಿರ್ಮಾಣಕ್ಕೆ ಸರ್ಕಾರ ಎಷ್ಟು ಜಾಗವನ್ನು ಮಂಜೂರು ಮಾಡಿದೆ ;

(ಆ) ಬೆಳ್ಳಿ ಪಾರ್ಕ್ ನಿರ್ಮಾಣದ ಮುಖ್ಯ ಉದ್ದೇಶವೇನು ; ಪಾರ್ಕ್ ನಿರ್ಮಾಣದಿಂದ ಎಷ್ಟು ಉದ್ಯೋಗ ಸೃಷ್ಟಿಸಲಾಗುತ್ತದೆ ಹಾಗೂ ಸ್ಥಳೀಯರಿಗೆ ಹೆಚ್ಚಿನ ಪ್ರಾಶ್ಯಸ್ತ್ಯ ನೀಡುವ ಉದ್ದೇಶವಿದೆಯೇ ;

(ಇ) ಬೆಳ್ಳಿ ಪಾರ್ಕ್ ನಿರ್ಮಾಣದ ಕಾಮಗಾರಿ ಯಾವ ಹಂತದಲ್ಲಿದೆ ; ಸದರಿ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## "ನರೇಗಾ" ಯೋಜನೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೬ (೩೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿರ್ಮಲ್ ಭಾರತ್ ಅಭಿಯಾನದಡಿ ಫಲಾನುಭವಿಗಳಿಗೆ "ನರೇಗಾ" ಯೋಜನೆಯಡಿ ಅನುದಾನ ಬಿಡುಗಡೆಯಾಗದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರ ಸೇರಿ ಒಟ್ಟು ಎಷ್ಟು ಸಹಾಯಧನ ನೀಡಲಾಗುತ್ತಿದೆ ; ಬೆಳಗಾವಿ ಜಿಲ್ಲೆಗೆ ಈ ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಅವಕಾಶ ಕಲ್ಪಿಸಲಾಗಿದೆ ; (ಮಾಹಿತಿ ನೀಡುವುದು)

(ಈ) ಸದರಿ ಅನುದಾನ ಬಿಡುಗಡೆ ಮಾಡಲು ಅಧಿಕಾರಿಗಳು ಅಡ್ಡಿ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಕೈಗೊಂಡ ಕ್ರಮಗಳೇನು ;

(ಉ) ೨೦೧೪-೧೫ನೇ ಸಾಲಿನಲ್ಲಿ ಈ ಯೋಜನೆಯಡಿ ಸಾಧಿಸಲಾಗಿರುವ ಪ್ರಗತಿ ಎಷ್ಟು ; ಎಷ್ಟು ಸಾಧಿಸಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ವಿಕಾಸ ಗ್ರಾಮ ಯೋಜನೆ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೧೭ (೩೮೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ತಾಲ್ಲೂಕು, ಕಸಬಾ ಹೋಬಳಿ, ಮುರಿಯೂರು, ವಿವೇಕಾನಂದ ನಗರ, ಅತ್ತಿಕುಳ್ಯಪಾಳ್ಯ, ಆನಂದಪಾಳ್ಯ ಸೇರಿದಂತೆ ವಿಕಾಸಗ್ರಾಮ ಮಾಡಲು ಶಿಫಾರಸ್ಸು ಮಾಡಲಾಗಿದೆಯೇ ;

(ಆ) ಹಲವಾರು ವರ್ಷಗಳಿಂದ ಬೇಡಿಕೆ ಇಟ್ಟಿದ್ದರೂ ನಿರ್ಲಕ್ಷ್ಯ ಮಾಡಲು ಕಾರಣವೇನು ;

(ಇ) ತಾಲ್ಲೂಕಿನಲ್ಲಿ ಸದರಿ ಗ್ರಾಮಗಳು ಅತಿ ದೊಡ್ಡ ಗ್ರಾಮಗಳಾಗಿದ್ದು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಹಿಂದೇಟು ಹಾಕಲು ಕಾರಣವೇನು ;

(ಈ) ಈ ವರ್ಷದಲ್ಲಿ ವಿಕಾಸಗ್ರಾಮ ಮಾಡಲು ಆದೇಶ ಮಾಡಲಾಗುವುದೇ ?

**ಸಾರ್ವಜನಿಕರಿಗೆ ಮರಳು ಸಿಗದೆ ತೊಂದರೆಯಾಗಿರುವ ಬಗ್ಗೆ**

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೧೮ (೩೮೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩–೪ ವರ್ಷಗಳಿಂದ ಮರಳು ಸಿಗದೆ ಸಾರ್ವಜನಿಕರು ಪರದಾಡುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಆ) ಮರಳು ನೀತಿಯನ್ನು ಸರ್ಕಾರ ಯಾವ ರೀತಿ ಸರಿಪಡಿಸಿದೆ ; ಇದರ ಮಾನದಂಡಗಳೇನು ;

(ಇ) ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದೆ ಮರಳು ಸಿಗುವಂತೆ ಸರ್ಕಾರ ಅನುಕೂಲ ಮಾಡಿ ಕೊಡಲಾಗುವುದೆ ;

(ಈ) ಹಾಗಿದ್ದಲ್ಲಿ, ಯಾವಾಗ ?

**ರಾಜ್ಯದ ಬಡ ನೇಕಾರರಿಗೆ ಸಿಗಬಹುದಾದ ಸೌಲಭ್ಯಗಳ ಬಗ್ಗೆ**

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೧೯ (೩೮೭) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕಾ ವಲಯದಲ್ಲಿ ರಾಜ್ಯದ ಬಡ ನೇಕಾರರಿಗೆ ವಿಶೇಷ ಗುಂಪಿನಲ್ಲಿ ಸೌಲಭ್ಯ ಕೊಡಲು ಸರ್ಕಾರ ತೀರ್ಮಾನಿಸಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಯೋಜನೆಗಳಲ್ಲಿ ಬಡ ನೇಕಾರರಿಗೆ ಈ ಸೌಲಭ್ಯ ದೊರೆಯಲಿದೆ ;

(ಇ) ಸಣ್ಣ ಕೈಗಾರಿಕಾ ವಲಯದಲ್ಲಿ ಕ್ಲಸ್ಟರ್ ಮೂಲಕ ನೇಕಾರರಿಗೆ ಸಹಾಯ ಮಾಡಲಾಗುವುದೇ ;

(ಈ) ಇಲ್ಲದಿದ್ದಲ್ಲಿ, ಈ ವರ್ಷದ ಆಯವ್ಯಯದಲ್ಲಿ ತೆಗೆದುಕೊಂಡು ರಾಜ್ಯದ ಬಡ ನೇಕಾರರಿಗೆ ಸರ್ಕಾರ ಆಸರೆಯಾಗುವುದೆ ?

## ಶ್ರೀ ಕಂಚಿರಾಯಸ್ವಾಮಿ ಬೆಟ್ಟಕ್ಕೆ ಯಾತ್ರಿನಿವಾಸ ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೨೦ (೩೮೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ತಾಲ್ಲೂಕು, ಕಸಬಾ ಹೋಬಳಿ ವೀರಗುಂದ ಅಜ್ಜೀನಹಳ್ಳಿ ಹಾಗೂ ಹತ್ತಾರು ಹಳ್ಳಿಗೆ ಸೇರಿರುವ ಶ್ರೀ ಕಂಚೀರಾಯಸ್ವಾಮಿ ಬೆಟ್ಟ ಪ್ರಸಿದ್ಧಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಾವಿರಾರು ಭಕ್ತರು ಆಗಮಿಸುವುದರಿಂದ ವಸತಿ ಸೌಕರ್ಯವಿಲ್ಲದೆ ಪರದಾಡುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಅನೇಕ ವರ್ಷಗಳಿಂದ ಯಾತ್ರಿನಿವಾಸ ಮಾಡಲು ಕೋರಿಕೆ ಸಲ್ಲಿಸಿದ್ದರೂ ನಿರ್ಮಿಸದಿರಲು ಕಾರಣವೇನು ;

(ಈ) ಈ ವರ್ಷದಲ್ಲಿ ಯಾತ್ರಿನಿವಾಸ ನಿರ್ಮಿಸಿ ಭಕ್ತರಿಗೆ ಅನುಕೂಲ ಮಾಡಿ ಕೊಡಲಾಗುವುದೇ ; ಹಾಗಿದ್ದಲ್ಲಿ, ಯಾವಾಗ ಮಾಡಲಾಗುವುದು ?

## ರಾಜ್ಯದ ಬಡ ನೇಕಾರರಿಗೆ ವಿಶೇಷ ವಸತಿ ಯೋಜನೆ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೨೧ (೩೮೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶೇಕಡ ೧೦% ರಷ್ಟು ಇರುವ ಬಡ ನೇಕಾರರಿಗೆ ವಸತಿ ಯೋಜನೆಯಲ್ಲಿ ತೆಗೆದುಕೊಂಡಿರುವ ಯೋಜನೆಗಳೇನು ;

(ಆ) ಬಡ ನೇಕಾರರನ್ನು ಯಾವ ಗುಂಪಿನಲ್ಲಿ ಸೇರಿಸಿ ವಸತಿಗಳನ್ನು ನೀಡಲಾಗುವುದು ;

(ಇ) ಸಾವಿರಾರು ನೇಕಾರರು ಅರ್ಜಿ ಕೊಟ್ಟರೂ ಅನೇಕ ವರ್ಷಗಳಿಂದ ನೇಕಾರರ ಅರ್ಜಿಗಳನ್ನು ತಿರಸ್ಕರಿಸಲು ಕಾರಣವೇನು ;

(ಈ) ನೇಕಾರರಿಗೆ ವಿಶೇಷ ಯೋಜನೆ ಇಲ್ಲದಿದ್ದಲ್ಲಿ ಈ ವರ್ಷದ ಆಯವ್ಯಯದಲ್ಲಿ ಹೊಸ ಯೋಜನೆ ಜಾರಿ ಮಾಡಿ ನೇಕಾರರಿಗೆ ಅನುಕೂಲ ಮಾಡಿ ಕೊಡಲಾಗುವುದೇ ?

## ಮಲೆನಾಡು ಪ್ರದೇಶದ ಶಾಲೆಗಳ ದುರಸ್ಥಿಗಾಗಿ ಅನುದಾನ ನೀಡುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೨ (೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಲೆನಾಡು ಪ್ರದೇಶದಲ್ಲಿ ಮಳೆಗಾಲದಲ್ಲಿ ಬಹಳಷ್ಟು ಶಾಲಾ ಕಟ್ಟಡಗಳು ಹಾಳಾಗುತ್ತಿದ್ದು, ಇವುಗಳ ದುರಸ್ಥಿಗಾಗಿ ನೀಡುತ್ತಿರುವ ಅನುದಾನ ಬಹಳ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಬಣಕಲ್ ಜೂನಿಯರ್ ಕಾಲೇಜು ಮಳೆಯಿಂದಾಗಿ ಬಿದ್ದು ಹೋಗುವ ಪರಿಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದ್ದರೂ, ಹಣ ಬಿಡುಗಡೆ ಮಾಡದಿರಲು ಕಾರಣವೇನು ?

## ರಾಜ್ಯದಲ್ಲಿ ಹೊಸದಾಗಿ ಸೃಜಿಸಲಾದ ಗ್ರಾಮ ಪಂಚಾಯಿತಿಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೩ (೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಸೃಜಿಸಲಾದ ಗ್ರಾಮ ಪಂಚಾಯಿತಿಗಳೆಷ್ಟು ; ಈ ಗ್ರಾಮ ಪಂಚಾಯಿತಿಗಳಿಗೆ ಸುವ್ಯವಸ್ಥಿತವಾದ ಕಟ್ಟಡಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಎಷ್ಟು ಅವಧಿಯೊಳಗಾಗಿ ಸುವ್ಯವಸ್ಥಿತ ಕಟ್ಟಡ ನಿರ್ಮಾಣ ಮಾಡಲಾಗುವುದು ? (ಮಾಹಿತಿ ನೀಡುವುದು)

## ಶಿಕ್ಷಕರ ವರ್ಗಾವಣೆ ಮಾರ್ಗಸೂಚಿಯಲ್ಲಿನ ನ್ಯೂನ್ಯತೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೪ (೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಶಿಕ್ಷಕರ ವರ್ಗಾವಣೆ ಮಾರ್ಗಸೂಚಿಯಲ್ಲಿ ಕೆಲವು ತಿದ್ದುಪಡಿ ಮಾಡಿದ್ದರೂ ಕೆಲವು ನ್ಯೂನ್ಯತೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಏನು ಕ್ರಮ ಕೈಗೊಂಡಿದೆ ;

(ಆ) ಈ ವರ್ಗಾವಣೆ ಮಾರ್ಗಸೂಚಿಯಲ್ಲಿ ವಿಶೇಷ ಶಿಕ್ಷಕರು (ಸಂಗೀತಾ, ಚಿತ್ರಕಲೆ ಮತ್ತು ಭೌತಿಕ ಶಿಕ್ಷಕರು) ಗಳಿಗೆ ಶೇಕಡವಾರು ಎಷ್ಟು ನಿಗಧಿಗೊಳಿಸಲಾಗಿದೆ ;

(ಇ) ಹಾಲಿ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ವಿಶೇಷ ಶಿಕ್ಷಕರುಗಳ ಸಂಖ್ಯೆ ಎಷ್ಟು ? (ಪ್ರತ್ಯೇಕವಾಗಿ ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ವೇತನ ಹೆಚ್ಚಿಸುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೨೫ (೩೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಎಷ್ಟು ಜನ ಶಿಕ್ಷಕರು ಸೇವೆ ಸಲ್ಲಿಸುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅದರಲ್ಲಿ ಎಷ್ಟು ಜನ ಉಪನ್ಯಾಸಕರು ಕಳೆದ ೧೦ ವರ್ಷಕ್ಕಿಂತಲೂ ಹೆಚ್ಚಿನ ಕಾಲ ಸೇವೆ ಸಲ್ಲಿಸಿರುತ್ತಾರೆ ;

(ಇ) ಈ ಅತಿಥಿ ಉಪನ್ಯಾಸಕರಿಗೆ ಪ್ರತಿ ತಿಂಗಳು ಎಷ್ಟು ಸಂಬಳ ನೀಡಲಾಗುತ್ತಿದೆ ;

(ಈ) ಬೇರೆ ರಾಜ್ಯಗಳಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರತಿ ತಿಂಗಳು ಎಷ್ಟು ವೇತನ ಕೊಡಲಾಗುತ್ತಿದೆ ;

(ಉ) ನಮ್ಮ ರಾಜ್ಯದ ಅತಿಥಿ ಉಪನ್ಯಾಸಕರಿಗೆ ಕೊಡುವ ಸಂಬಳ ಕಡಿಮೆಯಾಗಿದ್ದು, ಬೇರೆ ರಾಜ್ಯಗಳಂತೆ ಇಲ್ಲಿಯೂ ಹೆಚ್ಚಿನ ವೇತನ ನೀಡಲು ಕ್ರಮ ಕೈಗೊಳ್ಳಲಾಗುವುದೆ ?

## ವೇತನ ತಾರತಮ್ಯ ಸರಿಪಡಿಸುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೩೨೬ (೩೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವೇತನ ತಾರತಮ್ಯ ಸರಿಪಡಿಸಲು ಸರ್ಕಾರಕ್ಕೆ ಮನವಿಗಳು ಬಂದಿರುವ ಸಂಗತಿ ನಿಜವೇ ;

(ಆ) ಈ ವೇತನ ತಾರತಮ್ಯವನ್ನು ಸರಿಪಡಿಸಲು ಶ್ರೀ ಕುಮಾರ ನಾಯ್ಕ್ ನೇತೃತ್ವದ ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಸಿರುವ ಸಂಗತಿ ನಿಜವೇ ;

(ಇ) ಹಾಗಿದ್ದಲ್ಲಿ, ಸದರಿ ಸಮಿತಿಯ ವರದಿ ಪ್ರಕಾರ ವೇತನ ತಾರತಮ್ಯವನ್ನು ಸರಿಪಡಿಸಲು ಕ್ರಮಕೈಗೊಳ್ಳಲಾಗುವುದೇ ?

## ಶಿಕ್ಷಣ ಹಕ್ಕು ಕಾಯಿದೆ ಮಾರ್ಗ ಸೂಚಿಯ ವಿವರ ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೨೭ (೩೧೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಣ ಹಕ್ಕು ಕಾಯಿದೆಯಡಿ ೨೫% ಮೀಸಲು ಸೀಟು ಪ್ರವೇಶ ಪಡೆಯಲು ವಿದ್ಯಾರ್ಥಿಗಳು ಯಾವ ಯಾವ ಅರ್ಹತೆಗಳನ್ನು ಹೊಂದಿರಬೇಕು ; (ವಿವರ ಒದಗಿಸುವುದು)

(ಆ) ಪೋಷಕರು ಎಷ್ಟು ಆದಾಯ ಹೊಂದಿರಬೇಕು ಎಂಬ ನಿಯಮವಿದೆಯೇ ;

(ಇ) ಪೋಷಕರ ಕಡೆಯಿಂದ ಶಾಲೆಯ ಆಡಳಿತ ಮಂಡಳಿಯವರು ಅರ್ಜಿ ಪಡೆಯಲು ನಿರಾಕರಿಸುತ್ತಿರುವುದರಿಂದ ಅರ್ಜಿಯನ್ನು ಬೇರೆ ಯಾರಿಗೆ ಕೊಡಬೇಕು ;

(ಈ) ಅರ್ಜಿಯ ಫಾರ್ಮನ್ನು ಯಾರಿಂದ ಪಡೆಯಬೇಕು ; (ವಿವರ ಒದಗಿಸುವುದು)

(ಉ) ಪ್ರವೇಶ ಪಡೆಯುವ ಕಾಲಕ್ಕೆ ತಪ್ಪು ಆದಲ್ಲಿ ಅದನ್ನು ಸರಿಪಡಿಸುವ ಸಲುವಾಗಿ ಯಾವ ಅಧಿಕಾರಿಗಳನ್ನು ಸಂಪರ್ಕಿಸಬೇಕು ?

## ಪ್ರಾಥಮಿಕ ಶಾಲಾ ಮಕ್ಕಳ ಬ್ಯಾಗ್ ಹೊರೆ ಕಡಿಮೆ ಮಾಡುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೨೮ (೩೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಒಂದನೇಯ ತರಗತಿಯಿಂದ ಎಂಟನೇಯ ತರಗತಿಯವರೆಗಿನ ಶಾಲಾ ಮಕ್ಕಳ ಬ್ಯಾಗ್ ಹೊರೆ ಕಡಿಮೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ರಾಜ್ಯ ಶಿಕ್ಷಣ ಸಂಶೋಧನೆ ಪಾಲಕರು, ತರಬೇತಿ ನಿರ್ದೇಶನಾಲಯದವರು (ಡಿ.ಎಸ್.ಆರ್.ಟಿ.ಸಿ.) ಮತ್ತು ಸಾರ್ವಜನಿಕರು ಮಕ್ಕಳ ಬ್ಯಾಗ್ ಹೊರೆ ಕಡಿಮೆ ಮಾಡಲು ಯಾವ ಯಾವ ಸಲಹೆಗಳನ್ನು ನೀಡಿರುವರು ; (ವಿವರ ನೀಡುವುದು)

(ಇ) ಬ್ಯಾಗ್ ಹೊರೆ ಕಡಿಮೆ ಮಾಡಲು ಕೇಂದ್ರದ ಮಾನವ ಸಂಪನ್ಮೂಲ ಮತ್ತು ಅಭಿವೃದ್ಧಿ ಇಲಾಖೆ (ಎಂ.ಎಚ್.ಆರ್.ಡಿ) ಸಹ ರಾಜ್ಯ ಸರ್ಕಾರಕ್ಕೆ ಸೂಚಿಸಿದ ಸಂಗತಿ ನಿಜವೇ ; (ವಿವರ ನೀಡುವುದು)

(ಈ) ವಿದ್ಯಾರ್ಥಿಗಳು ಎಷ್ಟು ತೂಕದ ಬ್ಯಾಗ್‌ಗಳನ್ನು (ತರಗತಿ ಪ್ರಕಾರ) ಹೋರುತ್ತಿರುವರು ; ಅದನ್ನು ಕಡಿಮೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ?

## ಯೂರಿಯಾ ಗೊಬ್ಬರ ಕಾರ್ಖಾನೆಗೆ ಸ್ಥಳ ನೀಡುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೨೯ (೩೧೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರವು ಉತ್ತರ ಕರ್ನಾಟಕದಲ್ಲಿಯಾಗಲೀ ಅಥವಾ ರಾಜ್ಯದ ಯಾವುದೇ ಭಾಗದಲ್ಲಿಯಾಗಲೀ ಯೂರಿಯಾ ಗೊಬ್ಬರ ಕಾರ್ಖಾನೆ ಪ್ರಾರಂಭಿಸಲು ಸ್ಥಳ ನೀಡುವಂತೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯಲಾಗಿದೆಯೇ ;

(ಆ) ಕೇಂದ್ರ ರಾಸಾಯನಿಕ ಸಚಿವರು ಯೂರಿಯಾ ಗೊಬ್ಬರ ಕಾರ್ಖಾನೆ ತೆರೆಯಲು ಸ್ಥಳ ಕೊಡಲು ರಾಜ್ಯ ಸರ್ಕಾರದವರು ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಮೇಲಿನಿಂದ ಮೇಲೆ ಪತ್ರಿಕಾ ಹೇಳಿಕೆ ನೀಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯಕ್ಕೆ ಒಂದು ದೊಡ್ಡ ಉದ್ದಿಮೆ ಬರುತ್ತಿದ್ದು, ರಾಜ್ಯದ ಅಭಿವೃದ್ಧಿ ದೃಷ್ಟಿಯಿಂದ ಕೂಡಲೇ ಸ್ಥಳ ಕೊಡಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಈ ಕಾರ್ಖಾನೆ ಸ್ಥಾಪಿಸಲು ಎಷ್ಟು ಎಕರೆ ಜಮೀನಿನ ಅವಶ್ಯಕತೆ ಇದೆ ; ಈ ನಿಟ್ಟಿನಲ್ಲಿ ಸ್ಥಳವನ್ನು ಗುರುತಿಸಲಾಗಿದೆಯೇ ? (ವಿವರ ನೀಡುವುದು)

## ರಾಜ್ಯ ಸರ್ಕಾರಿ ಸ್ವಾಮ್ಯದ ಉದ್ದಿಮೆಗಳ ಕುರಿತು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೩೩೦ (೩೯೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ಸ್ವಾಮ್ಯತೆಗೆ ಒಳಪಟ್ಟ ಕಾರ್ಖಾನೆಗಳು, ಉದ್ಯಮಗಳು ಯಾವುವು ; (ವಿವರ ನೀಡುವುದು)

(ಆ) ಇವುಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಲಾಭದಲ್ಲಿರುವ ಮತ್ತು ನಷ್ಟದಲ್ಲಿರುವ ಉದ್ಯಮಗಳು ಯಾವುವು ; ಇಂತಹ ನಷ್ಟದಲ್ಲಿರುವ ಉದ್ಯಮಗಳಿಗೆ ಸರ್ಕಾರವು ಮಾಡುತ್ತಿರುವ ಮಾಸಿಕ ಖರ್ಚು ಎಷ್ಟು ; (ಸಂಬಳ, ಸಾರಿಗೆ, ಸಾದಿಲ್ವಾರು ಮುಂತಾದ ಖರ್ಚುಗಳ ಉದ್ಯಮವಾರು ನೀಡುವುದು)

(ಇ) ನಷ್ಟದಲ್ಲಿರುವ ಉದ್ಯಮಗಳ ಸ್ಥಿರ ಮತ್ತು ಚರ ಆಸ್ತಿಗಳ ವಿವರ ನೀಡುವುದು ; (ಉದ್ಯಮವಾರು ವಿವರ ನೀಡುವುದು)

(ಈ) ನಿರಂತರವಾಗಿ ನಷ್ಟ ಹೊಂದುತ್ತಿರುವ ಇಂತಹ ಉದ್ಯಮಗಳನ್ನು ಖಾಸಗಿಯವರಿಗೆ ಮಾರಾಟ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ?

## ರಾಜ್ಯದ ಡಿ.ಎಡ್. ಕಾಲೇಜುಗಳ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೩೩೧ (೩೯೪+೩೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ನಡೆದಿರುವ ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ನೀಡುವ ಪ್ರಕ್ರಿಯೆಯಲ್ಲಿ ಎಷ್ಟು ಜನ ಶಿಕ್ಷಕರ ಬಡ್ತಿಯನ್ನು ರದ್ದುಪಡಿಸಿ ಹಿಂಬಡ್ತಿ ನೀಡಲಾಗಿದೆ ; (ವಿವರ ನೀಡುವುದು)

(ಆ) ಡಿಪ್ಲೊಮೋ–ಇನ್–ಇಂಗ್ಲೀಷ್ ಪ್ರಮಾಣ ಪತ್ರವು ಅನೂರ್ಜಿತವಾಗಿರುವ ಹಿನ್ನೆಲೆಯಲ್ಲಿ ಹಿಂಬಡ್ತಿ ಪಡೆದ ಶಿಕ್ಷಕರ ಸಂಖ್ಯೆ ಎಷ್ಟು ; (ಹೆಸರು, ಕರ್ತವ್ಯದ ಸ್ಥಳ ಮುಂತಾದ ವಿವರ ನೀಡುವುದು)

(ಇ) ಇದೇ ರೀತಿಯಾಗಿ ಕರ್ನಾಟಕ ರಾಜ್ಯ ಮುಕ್ತವಿಶ್ವವಿದ್ಯಾನಿಲಯವು ಮಾನ್ಯತೆ ಕಳೆದುಕೊಂಡಿರುವ ಹಿನ್ನೆಲೆಯಲ್ಲಿ ಸದರಿ ವಿಶ್ವವಿದ್ಯಾನಿಲಯದ ಪದವಿ ಪಡೆದ ಶಿಕ್ಷಕರಿಗೆ ಹಿಂಬಡ್ತಿ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಅಂತಹವರ ಹೆಸರು, ಪದನಾಮ, ಕರ್ತವ್ಯದ ಸ್ಥಳ ಮುಂತಾದ ವಿವರ ನೀಡುವುದು ?

## ಆರ್.ಎಂ.ಎಸ್.ಎ. ಯೋಜನೆಯ ಅನುಷ್ಠಾನದ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೩೩೨ (೩೯೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಯೋಜನೆ (ಆರ್.ಎಂ.ಎಸ್.ಎ) ಯಂತೆ ೫+೩+೪ ಪ್ರಾಥಮಿಕ ಶಿಕ್ಷಣ ವ್ಯವಸ್ಥೆಯನ್ನು ಸರ್ಕಾರ ಒಪ್ಪಿದೆಯೇ ;

(ಆ) ಈ ಯೋಜನೆ ಜಾರಿಗೊಳಿಸಲು ಎದುರಾಗಿರುವ ಸಮಸ್ಯೆ ಏನು ; (ವಿವರ ನೀಡುವುದು)

(ಇ) ಈ ಯೋಜನೆಯನ್ನು ಯಾವಾಗಿನಿಂದ ಜಾರಿಗೊಳಿಸಲು ಸರ್ಕಾರ ತೀರ್ಮಾನಿಸಿದೆ ?

## ಕುಡಿಯುವ ನೀರಿನ ಸಮಸ್ಯೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೩ (೨೯೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯ ೯೭ ಗ್ರಾಮ ಪಂಚಾಯತಿ ವ್ಯಾಪ್ತಿಗಳಲ್ಲಿ ಕುಡಿಯುವ ನೀರಿನ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಂತರ್ಜಲ ಹೆಚ್ಚಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಈ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಶಾಶ್ವತವಾಗಿ ಕುಡಿಯುವ ನೀರು ಸರಬರಾಜು ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಈ ಗ್ರಾಮ ಪಂಚಾಯತಿಗಳಲ್ಲಿ ಯಾವ ಯಾವ ಸ್ಥಳಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲಾಗಿದೆ ; ಮುಂದಿನ ದಿನಗಳಲ್ಲಿ ಯಾವ ಯಾವ ಸ್ಥಳಗಳಲ್ಲಿ ಅಳವಡಿಸಲಾಗುವುದು ? (ವಿವರ ನೀಡುವುದು)

## ಗ್ರಾಮ ಪಂಚಾಯತಿಗಳಿಗೆ ಅನುದಾನ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೪ (೨೯೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ೯೭ ಗ್ರಾಮ ಪಂಚಾಯತಿಗಳಿಗೆ ಕಳೆದ ಎರಡು ವರ್ಷದಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಆ) ಅನುದಾನದ ಪೈಕಿ ಸದರಿ ಗ್ರಾಮ ಪಂಚಾಯತಿಗಳಲ್ಲಿ ಯಾವ ಯಾವ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಸರ್ಕಾರ ಬಿಡುಗಡೆ ಮಾಡಿರುವ ಅನುದಾನವು ಕೇವಲ ಸಿಬ್ಬಂದಿಗಳ ವೇತನಕ್ಕೆ ವೆಚ್ಚವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಮೂಲಸೌಕರ್ಯ ಅಭಿವೃದ್ದಿ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನ ಬಿಡುಗಡೆ ಮಾಡದೇ ಇರಲು ಕಾರಣಗಳೇನು ?

## ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ನಡೆಯುವ ಕಾಮಗಾರಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೫ (೪೨೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳ ವ್ಯಾಪ್ತಿಯ ಕ್ರಿಯಾ ಯೋಜನೆಯ ಕಾಮಗಾರಿಗಳ ಅನುಷ್ಠಾನದಲ್ಲಿ ಗ್ರಾಮಪಂಚಾಯತಿಗಳ ಪಾತ್ರವೇನು ;

(ಆ) ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳ ವ್ಯಾಪ್ತಿಯಲ್ಲಿ ಕೈಗೊಳ್ಳುವ ಕಾಮಗಾರಿಗಳ ಅನುಷ್ಠಾನದಲ್ಲಿ ಪ್ಯಾಕೇಜ್ ಟೆಂಡರ್ ಕಡ್ಡಾಯಗೊಳಿಸಲಾಗಿದೆಯೇ ; ಈ ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ತಾಂತ್ರಿಕ ಮತ್ತು ಆಡಳಿತಾತ್ಮಕ ಮಂಜೂರಾತಿ ನೀಡುವ ಅಧಿಕಾರವನ್ನು ಯಾರಿಗೆ ನೀಡಲಾಗಿದೆ ;

(ಇ) ಗ್ರಾಮ ವಿಕಾಸ ಯೋಜನೆ ಅನುಷ್ಠಾನದಲ್ಲಿ ಸರಳೀಕೃತ ಮಾರ್ಗಸೂಚಿಯನ್ನು ಸರ್ಕಾರವು ನೀಡಿದಲ್ಲಿ ಸ್ಥಳೀಯವಾಗಿ ನಿರ್ಧರಿಸಿ ತ್ವರಿತ ಅಭಿವೃದ್ಧಿ ಸಾಧ್ಯವಾಗಲು ಅನುಕೂಲವಾಗುವುದಿಲ್ಲವೇ ; ಈ ಕುರಿತು ಸರ್ಕಾರದ ನಿಲುವೇನು ?

## ರಾಜ್ಯದಲ್ಲಿ ೯, ೧೧ಎ ಮತ್ತು ೧೧ಬಿ ಗೆ ವಿನಾಯಿತಿ ಪಡೆದಿರುವ ಜಿಲ್ಲೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೬ (೪೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೯, ೧೧ಎ ಮತ್ತು ೧೧ಬಿ ಗೆ ಯಾವ ಯಾವ ಜಿಲ್ಲೆಗಳಿಗೆ ವಿನಾಯಿತಿ ನೀಡಲಾಗಿದೆ ;

(ಆ) ರಾಜ್ಯದಲ್ಲಿ ೯, ೧೧ಎ ಮತ್ತು ೧೧ಬಿನ್ನು ಸರ್ಕಾರ ಕೆಲವು ಜಿಲ್ಲೆಗಳಲ್ಲಿ ವಿನಾಯಿತಿಗೊಳಿಸಿರುವುದು ನೋಂದಾವಣಿ ಕಛೇರಿ ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಜಾರಿಗೊಂಡಿರುವುದೇ ; ಜಾರಿಗೊಳ್ಳದಿದ್ದಲ್ಲಿ ಕಾರಣವೇನು ;

(ಇ) ಇವುಗಳಿಂದ ಭೂಮಿ ನೋಂದಾವಣೆಗೆ ವಿನಾಯಿತಿಗೊಳಿಸಿದಲ್ಲಿ ಗ್ರಾಮ ಪಂಚಾಯತ್‌ಗಳಲ್ಲಿ ಮನೆ ಮತ್ತು ಕಟ್ಟಡ ನಂಬರ್ ದಾಖಲೀಕರಣಕ್ಕೆ ಯಾವ ವ್ಯವಸ್ಥೆ ಮಾಡಲಾಗಿದೆ ; ಮನೆ ಮತ್ತು ಕಟ್ಟಡ ದಾಖಲೀಕರಣಕ್ಕೆ ಯಾವ ದಾಖಲೆಗಳನ್ನು ನೀಡಬೇಕಾಗುತ್ತದೆ ;

(ಈ) ಈ ವಿಳಂಬದಿಂದಾಗಿ ವಿನಾಯಿತಿ ಪಡೆದಿರುವ ಜಿಲ್ಲೆಯ ಜನರು ಅನಗತ್ಯ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ವಸತಿ ಯೋಜನೆಯಡಿ ನೀಡುವ ಸಹಾಯಧನದ ಮೊತ್ತ ಹೆಚ್ಚಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೭ (೪೨೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ವಸತಿ ಯೋಜನೆಗಳಡಿಯಲ್ಲಿ ಫಲಾನುಭವಿಗಳನ್ನು ಗುರುತಿಸುವಾಗ ಆದಾಯದ ಮಿತಿಯನ್ನು ಹೆಚ್ಚಿಸುವ ಉದ್ದೇಶವನ್ನು ಸರ್ಕಾರವು ಹೊಂದಿದೆಯೇ ; ಇಲ್ಲವಾದಲ್ಲಿ, ಕಾರಣವೇನು ;

(ಆ) ರಾಜ್ಯದ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಮನೆ ನಿರ್ಮಾಣದ ವೆಚ್ಚವು ಅಧಿಕವಿದ್ದು, ಈಗಿನ ಸಹಾಯಧನವು ಫಲಾನುಭವಿಗಳಿಗೆ ಮನೆ ನಿರ್ಮಿಸಲು ಸಾಕಾಗುತ್ತಿಲ್ಲದಿರುವ ಕಾರಣ ಸಹಾಯಧನದ ಮೊತ್ತವನ್ನು ಹೆಚ್ಚಿಸುವ ಅಗತ್ಯತೆಯನ್ನು ಸರ್ಕಾರವು ಮನಗಂಡಿದೆಯೇ ; ಮನಗಂಡಲ್ಲಿ, ಶೀಘ್ರ ಕ್ರಮಕೈಗೊಳ್ಳಲಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ;

(ಇ) ರಾಜ್ಯದಲ್ಲಿ ಇಂದಿರಾ ಆವಾಸ್ ಯೋಜನೆಯಡಿ ಮನೆಗಳ ದುರಸ್ಥಿ ಹಾಗೂ ಉನ್ನತೀಕರಣಕ್ಕಾಗಿ ಸುಮಾರು ೧೫ ವರ್ಷಕ್ಕೂ ಹಿಂದೆ ನಿಗಧಿಪಡಿಸಿರುವ ರೂ. ೧೫,೦೦೦/– ಸಹಾಯಧನವೇ ಈಗಲೂ ಇದ್ದು ಇದನ್ನು ಕನಿಷ್ಠ ರೂ. ೫೦,೦೦೦ಕ್ಕೆ ಹೆಚ್ಚಿಸಲು ಸರ್ಕಾರವು ಉದ್ದೇಶಿಸಿದೆಯೇ ?

## ರಾಜ್ಯದಲ್ಲಿ ಉದ್ಯೋಗ ಖಾತರಿ ಯೋಜನೆಯಲ್ಲಿ ಅನುಷ್ಠಾನದಲ್ಲಿ ಆಗುತ್ತಿರುವ ವಿಳಂಬ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೮ (೪೨೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉದ್ಯೋಗ ಖಾತರಿ ಯೋಜನೆಯಲ್ಲಿ NMR ತೆಗೆಯಲು ಪ್ರತಿ ಹಂತಕ್ಕೂ ನಮೂನೆ ೬ (ಉದ್ಯೋಗ ಬೇಡಿಕೆ ಅರ್ಜಿ)ನ್ನು ಉಡುಪಿ ಜಿಲ್ಲೆ ವ್ಯಾಪ್ತಿಯಲ್ಲಿ ಕಡ್ಡಾಯಗೊಳಿಸಿ ಅನಗತ್ಯ ಕಡತ ಬೆಳೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಎಲ್ಲಾ ವ್ಯವಸ್ಥೆಗಳು ಆನ್‌ಲೈನ್‌ನಲ್ಲಿ ಇರುವಾಗ ಈ ರೀತಿ ಅಗತ್ಯವಿಲ್ಲದ ದಾಖಲೆಗಳ ಸೃಷ್ಟಿ ಮಾಡಿ ಕಡತ ಬೆಳೆಯುವುದರ ಅಗತ್ಯವೇನು ;

(ಇ) ಇದರಿಂದಾಗಿ ಉದ್ಯೋಗ ಖಾತ್ರಿ ಫಲಾನುಭವಿಗಳಿಗೆ ಪದೇ ಪದೇ ಗ್ರಾಮ ಪಂಚಾಯತ್‌ಗಳಿಗೆ ಹಾಜರಾಗುವುದರಿಂದ ತೊಂದರೆಯಾಗುವುದಿಲ್ಲವೇ ; ಇದು ಸಿಬ್ಬಂದಿಗಳಿಗೆ ಅನಗತ್ಯ ಕೆಲಸವಲ್ಲವೇ, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಇದನ್ನು ಸರಿಪಡಿಸಲು ಕ್ರಮ ಕೈಗೊಳ್ಳುವುದೇ ?

# ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಗಣಿಗಾರಿಕೆಗಳಿಂದಾಗುತ್ತಿರುವ ಅಪಾಯಕಾರಿ ಹೊಂಡಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೯ (೪೨೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗಣಿಗಾರಿಕೆಯಿಂದ ನಿರ್ಮಾಣವಾಗುತ್ತಿರುವ ಅಪಾಯಕಾರಿ ಹೊಂಡಗಳಿಂದ ಆಗುತ್ತಿರುವ ಅನಾಹುತಗಳನ್ನು ತಪ್ಪಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಈ ಬಗ್ಗೆ ರಕ್ಷಣಾ ಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ನಿರ್ವಹಿಸುತ್ತಿದೆಯೇ ; ಇಲ್ಲವಾದಲ್ಲಿ, ಕಾರಣವೇನು ;

(ಆ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಗಣಿಗಾರಿಕೆಗಳಿಗೆ ಗ್ರಾಮ ಪಂಚಾಯತ್‌ನ ಅನುಮತಿಯ ಅಗತ್ಯವಿಲ್ಲವೇ; ಇಲ್ಲವಾದಲ್ಲಿ, ಇದು ಪಂಚಾಯತ್ ರಾಜ್ ವ್ಯವಸ್ಥೆಯ ವಿರುದ್ಧವಾಗಿಲ್ಲವೇ ;

(ಇ) ರಾಜ್ಯದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಕೆಂಪು ಕಲ್ಲು ಗಣಿಗಾರಿಕೆಯಿಂದ ಆಗುತ್ತಿರುವ ಪರಿಸರ ಮಾಲಿನ್ಯ ಮತ್ತು ಅಧಿಕ ಭಾರದ ಕೆಂಪು ಕಲ್ಲುಗಳನ್ನು ಸಾಗಿಸುತ್ತಿರುವ ವಾಹನಗಳಿಂದ ಗ್ರಾಮೀಣ ರಸ್ತೆಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

## ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯತಿಗಳ ನಿರ್ಮಲೀಕರಣ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೪೦ (೩೯೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳು ಬರುತ್ತವೆ ;

(ಆ) ಇವುಗಳಲ್ಲಿ ಬಹುಪಾಲು ವೇಗದ ಗತಿಯಲ್ಲಿ ನಗರೀಕರಣಗೊಳ್ಳುತ್ತಿರುವುದು ನಿಜವೇ ;

(ಇ) ಈ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆ ಹಾಗೂ ಕೊಳಚೆ ನೀರು ಶುದ್ಧೀಕರಣ ಅವಶ್ಯಕತೆ ಇರುವುದು ನಿಜವೇ ;

(ಈ) ನಿಜವಾಗಿದ್ದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ಜಿಲ್ಲೆಯ ಸ್ವಚ್ಛ ಸುಂದರ ಪರಿಸರ ನಿರ್ಮಾಣಕ್ಕಾಗಿ ೨೦೧೬–೧೭ನೇ ಸಾಲಿನಲ್ಲಿ ಯಾವ ರೀತಿಯ ವಿಶೇಷ ಯೋಜನೆ ಕೈಗೊಳ್ಳಲು ಸರ್ಕಾರ ಮುಂದಾಗಿದೆ ?

## ಪ್ರೌಢ ಶಾಲಾ ದೈಹಿಕ ಶಿಕ್ಷಕರ ವಿಲೀನದ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೪೧ (೩೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಹಾಗೂ ಅನುದಾನಿತ ಪ್ರೌಢಶಾಲಾ ದೈಹಿಕ ಶಿಕ್ಷಕರು ಗ್ರೇಡ್–೧ ವೃಂದವನ್ನು ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್–೨ ತತ್ಸಮಾನ ವೃಂದಕ್ಕೆ ವಿಲೀನಗೊಳಿಸಲು ಸರ್ಕಾರ ಮುಂದಾಗಿರುವುದು ನಿಜವೇ ;

(ಆ) ಈ ಸಂಬಂಧ ಉಂಟಾಗಬಹುದಾದ ಸಾಧಕ–ಬಾಧಕಗಳ ಬಗ್ಗೆ ಅಧ್ಯಯನ ಮಾಡಲು ಅಧ್ಯಯನ ಸಮಿತಿ ರಚಿಸಿ ಬಂದ ನಂತರ ಸೂಕ್ತ ನಿರ್ಧಾರ ತೆಗೆದುಕೊಳ್ಳುವಂತೆ ಸಂಘ ಸಂಸ್ಥೆಗಳು ಸರ್ಕಾರವನ್ನು ಕೋರಿರುವುದು ನಿಜವೇ ; (ವಿವರ ನೀಡುವುದು)

(ಇ) ಸಂಘ ಸಂಸ್ಥೆಗಳ ಕೋರಿಕೆಗೆ ಸರ್ಕಾರದ ಪ್ರತಿಕ್ರಿಯೆ ಮತ್ತು ನಿರ್ಧಾರ ಏನು ?

## ಶಿಕ್ಷಕರ ನೇಮಕಾತಿ ವಿಧಾನ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೪೨ (೩೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಶಾಲಾ ಶಿಕ್ಷಕರ ನೇಮಕಾತಿ ವಿಧಾನವನ್ನು ರಾಜ್ಯ ಉಚ್ಚ ನ್ಯಾಯಾಲಯವು ರದ್ದುಪಡಿಸಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಈ ರೀತಿ ರದ್ದು ಪಡಿಸಲು ಕಾರಣಗಳೇನು ; ರದ್ದುಪಡಿಸಿದ್ದು ಯಾವಾಗ ;

(ಇ) ಈ ಸಂಬಂಧ ಶೀಘ್ರ ಶಿಕ್ಷಕರ ನೇಮಕಾತಿಗೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

## ಶಿಕ್ಷಕರ ವೇತನ ತಾರತಮ್ಯ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೪೩ (೩೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಕರುಗಳಿಗೆ ವೇತನ ತಾರತಮ್ಯ ನಿವಾರಣೆ ಕುರಿತಂತೆ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾಗಿದ್ದು, ಶ್ರೀ ಕುಮಾರ ನಾಯಕ್ ರವರು ವರದಿ ನೀಡಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ನೀಡಿರುವ ವರದಿಯಲ್ಲಿನ ಪ್ರಮುಖ ಅಂಶಗಳೇನು ; (ವಿವರ ನೀಡುವುದು) ಶಿಕ್ಷಕರುಗಳ ವೇತನ ತಾರತಮ್ಯ ನಿವಾರಣೆಯ ಬಗ್ಗೆ ಯಾವ ರೀತಿಯ ವರದಿ ನೀಡಿರುತ್ತಾರೆ ;

(ಇ) ಇವುಗಳಲ್ಲಿ ಯಾವ ಅಂಶಗಳನ್ನು ಮಾನ್ಯ ಮಾಡಿ ಜಾರಿಗೊಳಿಸಲಾಗಿದೆ ;

(ಈ) ವರದಿಯನ್ನು ಯಥಾವತ್ ಜಾರಿಗೊಳಿಸಲು ಯಾವ ಅಂಶಗಳಲ್ಲಿ ಅಡಚಣೆಯಾಗಿರುತ್ತದೆ ವಿವರ ನೀಡುವುದು ?

## KRIDCL ವತಿಯಿಂದ ಕೈಗೊಂಡ ಕಾಮಗಾರಿಗಳ ವಿವರ ಕುರಿತು

**ಶ್ರೀ ರಘುನಾಥರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೪ (೪೫೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಅಧೀನದ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ (ನಿ) (KRIDCL )ದಲ್ಲಿ ಕಾರ್ಯನಿರ್ವಹಿಸುತ್ತಿರುವ ವೃಂದವಾರು ಖಾಯಂ ಮತ್ತು ತಾತ್ಕಾಲಿಕ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕಳೆದ ೩ ವರ್ಷಗಳ ಅವಧಿಯಲ್ಲಿ KRIDCL ವತಿಯಿಂದ ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಪೂರ್ಣಗೊಳಿಸಿದ ಮತ್ತು ಚಾಲ್ತಿಯಲ್ಲಿರುವ ಕಾಮಗಾರಿಗಳ ಹಾಗೂ ಕಾಮಗಾರಿ ಸ್ಥಳಗಳ ಸಂಪೂರ್ಣ ವಿವರ ಒದಗಿಸುವುದು;

(ಇ) ಕಳೆದ ೩ ವರ್ಷಗಳ ಅವಧಿಯಲ್ಲಿ KRIDCL ವತಿಯಿಂದ ಕೈಗೊಳ್ಳಲಾದ/ಜಾರಿಯಲ್ಲಿರುವ ಕಾಮಗಾರಿಗಳ ಅಂದಾಜು ಪಟ್ಟಿಯ ಪ್ರತಿಗಳನ್ನು ಒದಗಿಸುವುದು ;

(ಈ) ಕಳೆದ ೩ ವರ್ಷಗಳಲ್ಲಿ ಕೈಗೊಳ್ಳಲಾದ/ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳು ಯಾವುವು ? (ಗುತ್ತಿಗೆದಾರರ ಸಂಪೂರ್ಣ ವಿವರಗಳನ್ನು ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿ ಕೈಗಾರಿಕಾ ವಲಯದಿಂದ ಹುದ್ದೆ ಕಲ್ಪಿಸುವ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೫ (೪೪೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸಾವಿರಾರು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಬಹುದಾದಂತಹ ಮಹತ್ವದ ಯೋಜನೆಯಾದ ಸಣ್ಣ ಕೈಗಾರಿಕಾ ವಸಾಹತು ಯೋಜನೆಗೆ ಚಾಲನೆ ನೀಡಲಾಗಿದೆಯೇ ;

(ಆ) ನೀಡಲಾಗಿದ್ದಲ್ಲಿ, ಯಾವ ಭಾಗದಲ್ಲಿ ಎಷ್ಟು ಎಕರೆ ಭೂ ಪ್ರದೇಶವನ್ನು ಕಾಯ್ದಿರಿಸಲಾಗಿದೆ ;

(ಇ) ಆಸಕ್ತರಿಂದ ನಿವೇಶನಕ್ಕಾಗಿ ಅರ್ಜಿ ಸಲ್ಲಿಕೆಯಾಗಿವೆಯೇ ; ಹಾಗಿದ್ದಲ್ಲಿ, ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ ; ಯಾವ ದಿನಾಂಕಕ್ಕೆ ಅರ್ಜಿ ಸಲ್ಲಿಸಿರುತ್ತಾರೆ ; (ವಿವರ ನೀಡುವುದು)

(ಈ) ಅರ್ಜಿಗಳನ್ನು ಆಹ್ವಾನಿಸಿದ ನಂತರದ ಕ್ರಮಗಳು ನಿಧಾನಗತಿಯಲ್ಲಿ ಸಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ವಿಳಂಬ ನಿವಾರಣೆಗೆ ಇರುವ ಅಡೆತಡೆಗಳೇನು ; ಯಾವಾಗ ನಿವೇಶನಗಳಿಗೆ ದರ ನಿಗಧಿ ಮಾಡಿ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು ?

## ಬೀದರ್ ಜಿಲ್ಲೆಗೆ ೨೦೧೪ ರಿಂದ ೨೦೧೫/೧೬ನೇ ವರ್ಷಕ್ಕೆ ಮಂಜೂರಾದ ಮನೆಗಳ ಬಗ್ಗೆ.

**ಶ್ರೀ ರಘುನಾಥರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೬ (೪೫೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ರಿಂದ ೧೫–೧೬ನೇ ಸಾಲಿನವರೆಗೆ ಬೀದರ್ ಜಿಲ್ಲೆಯಲ್ಲಿ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡದ ಜನರಿಗೆ

ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯತ್ ಗಳವಾರು, ತಾಲ್ಲೂಕುವಾರು, ವರ್ಷವಾರು, ಯೋಜನಾವಾರು ವಿವರ ನೀಡುವುದು)

(ಆ) ಮಂಜೂರಾದ ಮನೆಗಳ ಪೈಕಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ; ಮಾಡಿದ್ದಲ್ಲಿ ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಹಂಚಿಕೆ ಮಾಡಲಾಗಿರುವ ಮನೆಗಳ ಸಂಖ್ಯೆ ಎಷ್ಟು ; ರದ್ದುಗೊಳಿಸಲಾಗಿರುವ ಮನೆಗಳ ಸಂಖ್ಯೆ ಎಷ್ಟು ; ರದ್ದುಗೊಳಿಸಲು ಕಾರಣವೇನು ; (ವಿವರ ನೀಡುವುದು)

(ಈ) ಮಂಜೂರಾದ ಮನೆಗಳಲ್ಲಿ ಪೂರ್ಣಗೊಂಡಿರುವ ಹಾಗೂ ಅಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು ; ವಿವರ ನೀಡುವುದು) ಪೂರ್ಣಗೊಳ್ಳದೇ ಇರುವುದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಉ) ಈ ಸಾಲಿನಲ್ಲಿ ಯಾವ ಯಾವ ಯೋಜನೆಯಲ್ಲಿ ಎಷ್ಟು ಮನೆಗಳು ಹಂಚಿಕೆಯಾಗುತ್ತಿರುತ್ತವೆ ಮತ್ತು ಒಂದು ಮನೆಗೆ ಸರ್ಕಾರವು ನೀಡುತ್ತಿರುವ ಮೊತ್ತವೆಷ್ಟು ; ಹಾಗೆ ಅಧಿಕಾರಿಗಳು ಸದರಿ ಮೊತ್ತವನ್ನು ಕಡಿತಗೊಳಿಸುತ್ತಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಬಂದಿದೆಯೇ ; (ವಿವರ ನೀಡುವುದು)

(ಊ) ಮನೆಗಳನ್ನು ಹಂಚಿಕೆ ಮಾಡುವಲ್ಲಿ ಅನುಸರಿಸುತ್ತಿರುವ ವಿಧಾನ ಹಾಗೂ ಮಾನದಂಡಗಳೇನು ? (ಮಾಹಿತಿ ಒದಗಿಸುವುದು)

## ಶಿಕ್ಷಕರು ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ.

**ಶ್ರೀ ರಘುನಾಥರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೭(೪೫೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು/ಸಹ ಶಿಕ್ಷಕರು ಸಾರ್ವಜನಿಕ ಶಿಕ್ಷಣ ಇಲಾಖೆಯ ವಿವಿಧ ಕಛೇರಿಗಳಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಶಿಕ್ಷಕರ ಕಲ್ಯಾಣ ನಿಧಿ, ಶಿಕ್ಷಕರ ಸದನ, ಬೆಂಗಳೂರು ಕಛೇರಿಯಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು/ಸಹ ಶಿಕ್ಷಕರ ಸಂಖ್ಯೆ ಎಷ್ಟು ; ಇವರು ಕಳೆದ ಎಷ್ಟು ವರ್ಷಗಳಿಂದ ಈ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಶಿಕ್ಷಕರ ವಿವರ ನೀಡುವುದು)

(ಇ) ಈ ಶಿಕ್ಷಕರನ್ನು ಮಾತೃ ಸ್ಥಳಗಳಿಗೆ ಕಳುಹಿಸಲು ಕ್ರಮ ಕೈಗೊಳ್ಳುವಂತೆ ಆಯುಕ್ತರು ಸೂಚಿಸಿದ್ದು ನಿಜವೇ ; ಹಾಗಿದ್ದಲ್ಲಿ, ಈ ಶಿಕ್ಷಕರನ್ನು ಮಾತೃ ಸ್ಥಳಗಳಿಗೆ ಹಿಂದಿರುಗಿಸಲಾಗಿದೆಯೇ ; ಇಲ್ಲದೇ ಇದ್ದಲ್ಲಿ, ಕಾರಣವೇನು, ಈ ಶಿಕ್ಷಕರನ್ನು ಮಾತೃ ಸ್ಥಳಗಳಿಗೆ ಹಿಂದಿರುಗಿಸಲು ಕೈಗೊಂಡಿರುವ ಕ್ರಮಗಳೇನು ?

## ಮಾಗಡಿ ತಾಲ್ಲೂಕಿನ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೮ (೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆ ಮಾಗಡಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಇ) ತಿಪ್ಪಸಂದ್ರ ಹೋಬಳಿ, ಹುಳ್ಳೇನಹಳ್ಳಿ ಗ್ರಾಮದ ಅನುದಾನಿತ ಸರ್ವೋದಯ ಪ್ರೌಢಶಾಲೆಯ ಆವರಣದಲ್ಲಿ ಸರ್ಕಾರದಿಂದ ಕೊರೆಯಿಸಿ ಪಂಪ್ ಮೋಟಾರು ಅಳವಡಿಸಿ, ಬೋರ್‌ವೆಲ್‌ನಲ್ಲಿ ಸಾಕಷ್ಟು ನೀರಿದ್ದು, ಹೆಚ್ಚಿನ ನೀರನ್ನು ಸಾರ್ವಜನಿಕರಿಗೆ ಒದಗಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಈ) ತಿಪ್ಪಸಂದ್ರ ಹೋಬಳಿಯ ಹುಳ್ಳೇನಹಳ್ಳಿ ಗ್ರಾಮದಲ್ಲಿ ಸಾಕಷ್ಟು ನೀರಿನ ಲಭ್ಯತೆ ಇದ್ದರೂ ಕೂಡಾ ಟ್ಯಾಂಕರ್ ಮೂಲಕ ನೀರನ್ನು ಒದಗಿಸಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಕೊಳವೆ ಬಾವಿ ನೀರನ್ನು ಖಾಸಗಿ ವ್ಯಕ್ತಿಯೂ ತಮ್ಮ ಸ್ವಂತ ಕೃಷಿ ಜಮೀನಿಗೆ ಅಧಿಕಾರಿಗಳು ಶಾಮೀಲಾಗಿ ನೀರನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹುಳ್ಳೇನಹಳ್ಳಿ ಗ್ರಾಮಕ್ಕೆ ಸಾರ್ವಜನಿಕರಿಗೆ ತುರ್ತಾಗಿ ಕುಡಿಯುವ ನೀರನ್ನು ಒದಗಿಸುವ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವುದೇ ?

## ಪಂಚಾಯಿತಿ ಸದಸ್ಯರುಗಳಿಗೆ ಗೌರವಧನವನ್ನು ಹೆಚ್ಚಳ ಮಾಡುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪೯(೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆ ವ್ಯಾಪ್ತಿಯ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಯ ಸದಸ್ಯರುಗಳಿಗೆ ನೀಡುವ ಗೌರವ ಧನವೆಷ್ಟು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಕೊಡಗು ಜಿಲ್ಲೆಗೆ ಬಿಡುಗಡೆಯಾಗಿರುವ ಹಣ ಎಷ್ಟು ; (ಪಂಚಾಯಿತಿವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಜಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಯ ಸದಸ್ಯರುಗಳಿಗೆ ನೀಡುವ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇಲ್ಲವಾದಲ್ಲಿ ಗೌರವಧನವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿರುವ ಪ್ರವಾಸಿ ಸ್ಥಳಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೦(೮೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ರಾಜ್ಯ ಸರ್ಕಾರದ ಸುಪರ್ದಿಯಲ್ಲಿರುವ ಪ್ರವಾಸಿ ಸ್ಥಳಗಳು ಯಾವುವು ; ಈ ಸ್ಥಳಗಳಿಗೆ ಕಳೆದ ಮೂರು

ವರ್ಷಗಳ ಅವಧಿಯಲ್ಲಿ ನೀಡಿರುವ ಅನುದಾನ ಎಷ್ಟು ಹಾಗೂ ಖರ್ಚು ಮಾಡಿರುವ ಹಣ ಎಷ್ಟು ; ನಡೆಸಿದ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಆ) ಈ ಪ್ರವಾಸಿ ಸ್ಥಳಗಳನ್ನು ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರದ ಮುಂದಿರುವ ಯೋಜನೆಗಳು ಯಾವುವು? (ವಿವರ ನೀಡುವುದು)

## ಕೊಡಗು ಜಿಲ್ಲೆಗೆ ೨೦೧೬ರ GIM ನಲ್ಲಿ ಹೂಡಿಕೆ ಮಾಡಲು ಬಂದಿರುವ ಕಂಪನಿಗಳು

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೧ (೮೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೬ ರ ಜನವರಿ ತಿಂಗಳಿನಲ್ಲಿ ಬೆಂಗಳೂರಿನಲ್ಲಿ ನಡೆದ GIM (Global Investor Meet) ನಲ್ಲಿ ಕೊಡಗು ಜಿಲ್ಲೆಗೆ ಯಾವುದಾದರೂ ಕಂಪನಿ ಯಾವುದಾದರೂ ವಿಷಯವಾಗಿ ಹೂಡಿಕೆ ಮಾಡಲು ಮುಂದೆ ಬಂದಿರುತ್ತವೆಯೇ; ಇದ್ದಲ್ಲಿ ಆ ಕಂಪನಿ ಯಾವುವು, ಯಾವ ವಿಷಯವಾಗಿ ಹೂಡಿಕೆ ಮಾಡಲು ಮುಂದೆ ಬಂದಿದೆ ? (ವಿವರ ನೀಡುವುದು)

## ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ವಾಹನ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೨ (೩೦೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಎಲ್ಲಾ ಬಗೆಯ ಖಾಸಗಿ ವಾಹನಗಳ ಪ್ರವೇಶವನ್ನು ನಿಷೇಧಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ಬೆಟ್ಟಕ್ಕೆ ಹಾಗೂ ಬೆಟ್ಟದ ಮೇಲಿನ ಗೋಪಾಲಸ್ವಾಮಿ ದೇವಾಲಯಕ್ಕೆ ಹೋಗುವ ಪ್ರವಾಸಿಗರು ಭಕ್ತರಿಗೆ ಬಹಳ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳ ಜೊತೆಗೆ, ಅರಣ್ಯ ಇಲಾಖೆಯ ವಾಹನಗಳನ್ನೇ ಹೆಚ್ಚಿನ ಸಂಖ್ಯೆಯಲ್ಲಿ ಬೆಟ್ಟದ ಕೆಳಗಿರುವ ಟೋಲ್ ಗೇಟ್‌ನಿಂದ ಓಡಿಸುವ ಮೂಲಕ ಪ್ರವಾಸಿಗರಿಗೆ ಅನುಕೂಲ ಮಾಡಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಈ) ಟೋಲ್‌ಗೇಟ್ ಬಳಿ ನಿಲ್ಲಿಸುವ ಖಾಸಗಿ ವಾಹನಗಳಿಗೆ ಸೂಕ್ತ ವಾಹನ ನಿಲ್ದಾಣವನ್ನು ನಿರ್ಮಿಸಿ, ಪ್ರವಾಸಿಗರಿಗೆ ಕುಡಿಯುವ ನೀರು, ಶೌಚಾಲಯ ಹಾಗೂ ಅಂಗಡಿ ಮುಂಗಟ್ಟಿನ ಸೌಲಭ್ಯಗಳನ್ನು ಕಲ್ಪಿಸುವ ಕ್ರಮ ಜರುಗಿಸಲಾಗುವುದೇ ?

## ಬಸ್ ಪಾಸ್ ನೀಡುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೩ (೨೯೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಸದಸ್ಯರು, ಅಧ್ಯಕ್ಷರು, ಉಪಾಧ್ಯಕ್ಷರು ಪಂಚಾಯಿತಿ ಕೆಲಸದ ನಿಮಿತ್ತ ತಮ್ಮ ತಮ್ಮ ಕ್ಷೇತ್ರದಿಂದ ತಾಲ್ಲೂಕು

ಮತ್ತು ಜಿಲ್ಲಾ ಕೇಂದ್ರಗಳಿಗೆ ಹೋಗಿ ಬರಲು ಅನುಕೂಲವಾಗುವಂತೆ ಬಸ್ ಪಾಸ್ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಈ ಬಗ್ಗೆ ಸರ್ಕಾರ ಚಿಂತನೆ ನಡೆಸುವುದೇ?

## ಗ್ರಾಮ, ತಾಲ್ಲೂಕು, ಜಿಲ್ಲಾ ಪಂಚಾಯಿತಿ ಸದಸ್ಯರ ಅಧ್ಯಕ್ಷರು, ಉಪಾಧ್ಯಕ್ಷರುಗಳಿಗೆ ಗೌರವ ಧನದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೪ (೨೯೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ, ಅಧ್ಯಕ್ಷರುಗಳಿಗೆ, ಉಪಾಧ್ಯಕ್ಷರುಗಳಿಗೆ ಹಾಲಿ ನೀಡುತ್ತಿರುವ ಗೌರವಧನ ಎಷ್ಟು ; ಈ ಗೌರವಧನವನ್ನು ಹೆಚ್ಚಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ, ಅಧ್ಯಕ್ಷರುಗಳಿಗೆ, ಉಪಾಧ್ಯಕ್ಷರುಗಳಿಗೆ ನೀಡಲು ಬಾಕಿ ಇರುವ ಗೌರವಧನದ ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಬಾಕಿ ಮೊತ್ತವನ್ನು ತಕ್ಷಣ ನೀಡಲು ಹಾಗೂ ಪ್ರತಿ ತಿಂಗಳೂ ಸರಿಯಾಗಿ ಇವರಿಗೆ ಗೌರವಧನ ದೊರೆಯುವಂತಾಗಲೂ, ವಿಧಾನ

ಮಂಡಲದ ಶಾಸಕರಿಗೆ ವೇತನಭತ್ಯೆ ನೀಡುವ ಮಾದರಿಯಲ್ಲಿ ಪ್ರತ್ಯೇಕ ಹೆಡ್ ಆಫ್ ಅಕೌಂಟ್ ಸೃಷ್ಟಿಸಲು ಹಾಗೂ ಆಯವ್ಯಯ ಒದಗಿಸಲು ಕ್ರಮ ಜರುಗಿಸಲಾಗುವುದೇ ;

(ಈ) ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ನಿವೃತ್ತಿ ವೇತನ ಒದಗಿಸುವ ಚಿಂತನೆ ಸರ್ಕಾರದ ಮುಂದಿದೆಯೇ ?

## ರಸ್ತೆ ನಿರ್ಮಾಣದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೫ (೨೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರಕ್ಕೆ ಹೊಂದಿಕೊಂಡಿರುವ ಮಾಗಡಿ ತಾಲ್ಲೂಕು ತಿಪ್ಪೆಗೊಂಡನಹಳ್ಳಿ ಸೇತುವೆಯಿಂದ ಸಿಂಗದಾಸನಹಳ್ಳಿ ಗ್ರಾಮಕ್ಕೆ ಹಾಲಿಯಿರುವ ಕಚ್ಚಾ ರಸ್ತೆ ಎಷ್ಟು ಕಿ.ಮೀ ಇರುತ್ತದೆ ಹಾಗೂ ಎಷ್ಟು ಅಡಿ ಅಗಲವಿರುತ್ತದೆ ;

(ಆ) ಸದರಿ ಕಚ್ಚಾ ರಸ್ತೆಯನ್ನು ಕೂಡಲೇ ವಿಸ್ತರಣೆ ಮಾಡಿ ಜನ ಸಂಚಾರಕ್ಕೆ ಯೋಗ್ಯವಾದ ಮೆಟ್ಲಿಂಗ್ ಮತ್ತು ಬಾರು ರಸ್ತೆಯನ್ನಾಗಿ ನಿರ್ಮಿಸಬೇಕೆಂದು ಯಾವ ದಿನಾಂಕದಂದು ಟಿಪ್ಪಣಿ ಮೇಲೆ ಆದೇಶ ಮಾಡಲಾಗಿದೆ ಈ ಆದೇಶದಂತೆ ಕಾಮಗಾರಿ ಮಾಡಿಸಲು ಸರ್ಕಾರದ ಹಿರಿಯ ಅಧಿಕಾರಿಗಳು ಕೈಗೊಂಡಿರುವ ಕ್ರಮಗಳೇನು ; ಕ್ರಮ ಕೈಗೊಳ್ಳದಿದ್ದರೆ ಸಚಿವರ ಆದೇಶವನ್ನು ಪಾಲಿಸದ ಅಧಿಕಾರಿಗಳು ಯಾರು ಯಾರು ;

(ಇ) ಸದರಿ ರಸ್ತೆ ನಿರ್ಮಿಸಲು ಯಾವ ಶಾಸನ ಸಮಿತಿಯ ಮೂಲ ಯಾವ ದಿನಾಂಕದಂದು ಸರ್ಕಾರಕ್ಕೆ ಕೋರಿಕೆ ಬಂದಿದೆ ; ಈ ಬಗ್ಗೆ ಸರ್ಕಾರ ಈವರೆವಿಗೆ ಕೈಗೊಂಡ ಕ್ರಮಗಳಾವುವು ;

(ಈ) ಮೇಲ್ಕಂಡ ರಸ್ತೆಯನ್ನು ೨೦೧೫-೧೬ನೇ ಸಾಲಿನಲ್ಲೇ ಆದ್ಯತೆ ಮೇಲೆ ಮಾಡಿಸಲು ಕೈಗೊಂಡಿರುವ ಅಥವಾ ಕೈಗೊಳ್ಳುವ ಕ್ರಮಗಳೇನು ?

## ರಾಜ್ಯ ಸರ್ಕಾರದ ಯೋಜನೆಯಾದ 'ಶೂ-ಸಾಕ್ಸ್ ಭಾಗ್ಯ" ಘೋಷಣೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):-**

೩೫೬(೩೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರದ ಮಹತ್ವಕಾಂಕ್ಷೆ ಯೋಜನೆಯಾದ "ಶೂ-ಸಾಕ್ಸ್ ಭಾಗ್ಯ" ಘೋಷಣೆಯಾಗಿ ವರ್ಷವಾದರೂ ಜಾರಿಗೆ ಬಾರದೆ ಇರುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಈ ಯೋಜನೆಗಾಗಿ ಸರ್ಕಾರ ನಿಗಧಿಪಡಿಸಿರುವ ಅನುದಾನ ಎಷ್ಟು; ರಾಜ್ಯದ ಎಷ್ಟು ವಿದ್ಯಾರ್ಥಿಗಳಿಗೆ ಈ ಯೋಜನೆಯಲ್ಲಿ ಶೂ-ಸಾಕ್ಸ್ ವಿತರಿಸಲಾಗುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ನೀಡಲಾಗುವ ಶೂ–ಸಾಕ್ಸ್ ಗಳನ್ನು ಸರಬರಾಜು ಮಾಡಲು ಯಾವ ಕಂಪನಿಯವರಿಗೆ ಟೆಂಡರ್ ನೀಡಲಾಗಿದೆ ; ಯಾವ ಮಾನದಂಡಗಳ ಆಧಾರದ ಮೇಲೆ ಟೆಂಡರ್ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಶೂ–ಸಾಕ್ಸ್ ಜೊತೆಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಸೈಕಲ್ ನೀಡುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿ ನೂತನ ಗ್ರಾಮ ಪಂಚಾಯತ್ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೫೭ (೩೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಗಳು ರಚನೆಯಾಗಿವೆ ; (ತಾಲ್ಲೂಕುವಾರು ಮತ್ತು ಗ್ರಾಮವಾರು ಮಾಹಿತಿ ನೀಡುವುದು)

(ಆ) ರಚನೆಗೊಂಡ ಗ್ರಾಮ ಪಂಚಾಯಿತಿಗಳ ಸ್ವಂತ ಕಟ್ಟಡಗಳಲ್ಲಿ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಮತ್ತು ಇನ್ನಿತರ ಯಾವ ಯಾವ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ; (ತಾಲ್ಲೂಕುವಾರು ಮತ್ತು ಗ್ರಾಮವಾರು ಮಾಹಿತಿ ನೀಡುವುದು)

(ಇ) ನೂತನವಾಗಿ ರಚನೆಗೊಂಡ ಗ್ರಾಮ ಪಂಚಾಯಿತಿಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕೈಗೊಂಡಿರುವ ಕ್ರಮವೇನು ;

(ಈ) ಮೂಲಭೂತ ಸೌಕರ್ಯಗಳಿಗಾಗಿ ಪ್ರತಿ ಗ್ರಾಮ ಪಂಚಾಯಿತಿಗೆ ಮೀಸಲಿಟ್ಟ ಅನುದಾನವೆಷ್ಟು ; ಬಿಡುಗಡೆ ಮಾಡಿದ ಅನುದಾನವೆಷ್ಟು ಹಾಗೂ ಬಾಕಿ ಇರುವ ಅನುದಾನವೆಷ್ಟು ? (ತಾಲ್ಲೂಕುವಾರು ಮತ್ತು ಗ್ರಾಮವಾರು ಮಾಹಿತಿ ನೀಡುವುದು)

**ನಿವೇಶನ ರಹಿತ ಕುಟುಂಬಗಳ ಕುರಿತು.**

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೫೮ (೩೧೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿರುವ ನಿವೇಶನ ರಹಿತ ಕುಟುಂಬಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಕುಟುಂಬಗಳಿಗೆ ಯಾವ ಯಾವ ಯೋಜನೆಗಳ ಅಡಿಯಲ್ಲಿ ನಿವೇಶನ ನೀಡಲು ನಿರ್ಧರಿಸಲಾಗಿದೆ ;

(ಇ) ನಿವೇಶನದ ಜೊತೆಗೆ ಶೌಚಾಲಯವನ್ನು ಮಂಜೂರಾತಿ ನೀಡುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವಾಗ ಈ ಯೋಜನೆಯನ್ನು ಜಾರಿಗೆ ತರಲಾಗುವುದು ; ಇದಕ್ಕೆ ಇರುವ ನಿಬಂಧನೆಗಳೇನು ?

(ಈ) ಇದಕ್ಕಾಗಿ ಒಬ್ಬ ಫಲಾನುಭವಿಗೆ ಒದಗಿಸಲಾಗುವ ಮೊತ್ತ ಎಷ್ಟು; (ವಿವರ ನೀಡುವುದು)

## ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳ ವೈದ್ಯಕೀಯ ವಿಮಾ ಸೌಲಭ್ಯ ನೀಡುವ ಬಗ್ಗೆ

**ಶ್ರೀಮತಿ ತಾರಾ ಅನುರಾಧ (ನಾಮ ನಿರ್ದೇಶನ ಹೊಂದಿದವರು):–**

೩೫೯ (೪೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದ ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳನ್ನು ವೈದ್ಯಕೀಯ ವಿಮಾ ಸೌಲಭ್ಯದಡಿ ತರುವ ಕುರಿತು ಸರ್ಕಾರದ ಚಿಂತನೆ ಹಾಗೂ ಕ್ರಮಗಳೇನು ?

## ವಿಜಯಪುರ, ಬಾಗಲಕೋಟೆ ಮತು ಬೆಳಗಾವಿ ಜಿಲ್ಲೆಗಳ ಪರಿಶಿಷ್ಠ ಜಾತಿ /ಪರಿಶಿಷ್ಠ ಪಂಗಡ ಆಡಳಿತ ಮಂಡಳಿಗಳ ಕುರಿತು

**ಶ್ರೀಮತಿ ತಾರಾ ಅನುರಾಧ (ನಾಮ ನಿರ್ದೇಶನ ಹೊಂದಿದವರು):–**

೩೬೦ (೪೪೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳ ಯಾವ ಯಾವ ಶಾಲೆ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡ ಆಡಳಿತ ಮಂಡಳಿಯ ಶಾಲೆಯಾಗಿ ಅನುದಾನಕ್ಕೆ ಒಳಪಟ್ಟಿವೆ ; (ಪ್ರತಿಯೊಂದು ಶಾಲೆ ಹಾಗೂ ಆಡಳಿತ ಮಂಡಳಿಯ ಹೆಸರು, ವಿಳಾಸ ಸಹಿತ ವಿವರ ನೀಡುವುದು)

(ಆ) ಈ ಶಾಲೆಗಳ ಮಾನ್ಯತೆಯನ್ನು ನವೀಕರಣ ಮಾಡಲಾಗಿದೆಯೇ; (ವಿವರ ನೀಡುವುದು)

(ಇ) ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಆಡಳಿತ ಮಂಡಳಿಗಳು ಈಗ ಸಾಮಾನ್ಯ ಆಡಳಿತ ಮಂಡಳಿಯಾಗಿ ಪರಿವರ್ತನೆಯಾಗಿರುವುದನ್ನು ಇಲಾಖೆ ಗುರುತಿಸಿದೆಯೇ ; ಈ ಕುರಿತು ಇರುವ ನಿಯಮವೇನು?

## " ನ್ಯೂ ಪೆನ್ಷನ್ ಸ್ಕೀಮ್" ನ್ನು ರದ್ದುಪಡಿಸುವ ಕುರಿತು

**ಶ್ರೀಮತಿ ತಾರಾ ಅನುರಾಧ (ನಾಮ ನಿರ್ದೇಶನ ಹೊಂದಿದವರು) :-**

೩೬೧ (೪೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ "ನ್ಯೂ ಪೆನ್ಷನ್ ಸ್ಕೀಂ ನ್ನು ಯಾವಾಗ ಜಾರಿಗೊಳಿಸಲಾಯಿತು ?

(ಆ) ಎಷ್ಟು ಜನ ಶಿಕ್ಷಕರು/ಉಪನ್ಯಾಸಕರು/ಬೋಧಕೇತರ ಸಿಬ್ಬಂದಿ "ನ್ಯೂ ಪೆನ್ಷನ್ ಸ್ಕೀಮ್'ನ ಅಡಿ ಕಾರ್ಯ ನಿರ್ವಹಿಸುತ್ತಿದ್ದಾರೆ; (ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಕಾಲೇಜುಗಳವಾರು ವಿವರ ನೀಡುವುದು)

(ಇ) ಹೊಸ ಪೆನ್ಷನ್ ಸ್ಕೀಂ ರದ್ದು ಮಾಡಿ ಹಳೇ ಪೆನ್ಷನ್ ಸ್ಕೀಮ್ ಜಾರಿಗೆ ತರಬೇಕೆಂಬ ಬೇಡಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ಚಿಂತನೆ ಹಾಗೂ ಕ್ರಮಗಳೇನು ?

## ಬೀದರ್ ಜಿಲ್ಲೆಯ ಕುಡಿಯುವ ನೀರಿನ ಸೌಲಭ್ಯದ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೬೨ (೩೬೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸೌಲಭ್ಯದಿಂದ ಅನೇಕ ಹಳ್ಳಿಗಾಡಿನ ಜನರು ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೀದರ್ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈಗಾಗಲೇ ಎಷ್ಟು ತಾಲ್ಲೂಕುಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲಾಗಿದೆ? (ವಿವರ ನೀಡುವುದು)

## ನೂತನವಾಗಿ ಆಯ್ಕೆಯಾಗಿರುವ ಗ್ರಾಮ ಪಂಚಾಯತ್ ಸದಸ್ಯರ ವೇತನ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೩ (೩೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೂತನವಾಗಿ ಆಯ್ಕೆಯಾದ ಗ್ರಾಮ ಪಂಚಾಯತ್ ಸದಸ್ಯರಿಗೆ ನೀಡುತ್ತಿರುವ ಗೌರವಧನ ಎಷ್ಟು ;

(ಆ) ಈ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಈ ನೂತನ ಸದಸ್ಯರಿಗೆ ಸರ್ಕಾರದಿಂದ ತರಬೇತಿ ನೀಡುವ ವಿಚಾರ ಸರ್ಕಾರದ ಮುಂದಿದೆಯೇ ; ಇದ್ದರೆ ಇದನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು?

## ಜಾಗತೀಕ ಬಂಡವಾಳ ಹೂಡಿಕೆಯ ಸಮಾವೇಶ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೪(೩೭೦) ಮಾನ್ಯ ಬೃಹತ್ ಮತ್ತು ಮಾಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿ ಇತ್ತೀಚಿಗೆ ನಡೆದ ಜಾಗತೀಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಹೈದರಾಬಾದ್–ಕರ್ನಾಟಕ ಭಾಗದಲ್ಲಿ ಎಷ್ಟು ಬಂಡವಾಳ ಹೂಡಿಕೆಯಾಗಿದೆ ; ಬಂಡವಾಳ ಹೂಡಿರುವ ಕಂಪನಿ ಮತ್ತು ಉದ್ದಿಮೆದಾರರ ವಿವರ ತಿಳಿಸುವುದು ;

(ಆ) ಇದರಿಂದ ಹೈದರಾಬಾದ್–ಕರ್ನಾಟಕದ ಜನತೆಗೆ ಉದ್ಯೋಗಾವಕಾಶಗಳು ಸಿಗಲಿವೆಯೇ ; (ವಿವರ ನೀಡುವುದು)

(ಇ) ಈ ಭಾಗದಲ್ಲಿ ಯಾವ ಯಾವ ಕಂಪನಿಗಳು ಬಂಡವಾಳ ಹೂಡಲು ಮುಂದಾಗಿವೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ವಸತಿ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೫(೩೬೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ವಸತಿ ಹೀನರಿಗೆ ವಸತಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಪ್ರಸಕ್ತ ಸಾಲಿನಲ್ಲಿ ಇಂದಿರಾ ಅವಾಸ್ ಆಶ್ರಯ ಯೋಜನೆ, ವಾಲ್ಮೀಕಿ ಅಂಬೇಡ್ಕರ್ ಅವಾಸ್ ಯೋಜನೆ, ಬಸವಶ್ರೀ ವಸತಿ ಯೋಜನೆಗಳಲ್ಲಿ ಬೀದರ್‌ನಲ್ಲಿ ಎಷ್ಟು ಫಲನಾಭವಿಗಳಿಗೆ ವಸತಿಗಳನ್ನು ಮಂಜೂರು ಮಾಡಲಾಗಿದೆ ? (ತಾಲ್ಲೂಕುವಾರು ನೀಡುವುದು)

## ಗಡಿ ಭಾಗದ ಜಿಲ್ಲೆಗಳಲ್ಲಿ ಕನ್ನಡ ಶಾಲೆಗಳನ್ನು ಮುಚ್ಚುತ್ತಿರುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೬(೩೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗಡಿ ಭಾಗದ ಜಿಲ್ಲೆಗಳಲ್ಲಿ ಕನ್ನಡ ಶಾಲೆಗಳನ್ನು ಮುಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಶಾಲೆಗಳನ್ನು ಮುಚ್ಚಲಾಗಿದೆ ; ಮುಚ್ಚಲು ಕಾರಣಗಳೇನು ;

(ಆ) ಗಡಿ ಭಾಗದ ಪಕ್ಕದ ರಾಜ್ಯಗಳಲ್ಲಿ ಎಷ್ಟು ಕನ್ನಡ ಮಾಧ್ಯಮ ಶಾಲೆಗಳು ನಡೆಯುತ್ತಿವೆ ;

(ಇ) ಈ ಶಾಲೆಗಳ ಮೂಲಭೂತ ಸೌಕರ್ಯಗಳಿಗೆ ಸರ್ಕಾರದಿಂದ ಅನುದಾನ ನೀಡಲಾಗಿದೆಯೇ ; ಇಲ್ಲವಾದರೆ, ಅನುದಾನ ನೀಡುವ ಯೋಜನೆ ಇದೆಯೇ ?

## ಕೋಲಾರ ಜಿಲ್ಲೆಗೆ ಗಣಿ ಇಲಾಖೆಯಿಂದ ಜಲ್ಲಿ ಕ್ರಷರ್‌ಗಳ ಪರವಾನಗಿ ನೀಡಿರುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೭(೩೭೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಜಿಲ್ಲೆಯಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಜಲ್ಲಿ ಕ್ರಷರ್‌ಗಳಿಗೆ ಇದುವರೆವಿಗೂ ಪರವಾನಗಿ ನೀಡಿರುವ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹೆಸರು ಮತ್ತು ಪರವಾನಗಿ ನೀಡಿರುವ ಜಾಗದ ವಿಸ್ತೀರ್ಣದ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ಯಾವ ಯಾವ ಗಣಿಗಳನ್ನು ಗುತ್ತಿಗೆ ಪಡೆದಿರುವ ಪರವಾನಗಿದಾರರಿಂದ ಸರ್ಕಾರಕ್ಕೆ ನೀಡಬೇಕಾಗಿರುವ ಗುತ್ತಿಗೆ ಹಣ ಬಾಕಿ ಎಷ್ಟು ;

(ಇ) ಬಾಕಿ ಉಳಿಸಲು ಕಾರಣಗಳೇನು ; ವಸೂಲಾತಿಗೆ ವಿಳಂಬ ಏಕೆ ;

(ಈ) ಕೋಲಾರ ಜಿಲ್ಲೆಯಲ್ಲಿ ಅನಧಿಕೃತ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಯಾರು ಯಾರು ಅನಧಿಕೃತ ಗಣಿಗಾರಿಕೆ ನಡೆಸುತ್ತಿದ್ದಾರೆ ಇವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು ?

## ಶಿಕ್ಷಣ ಸಂಸ್ಥೆಗಳು ಹೆಚ್ಚು ಶುಲ್ಕ ಪಾವತಿ ಮಾಡಿಕೊಳ್ಳುತ್ತಿರುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೮(೪೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯಲ್ಲಿರುವ ೧ನೇ ತರಗತಿಯಿಂದ ೧೦ನೇ ತರಗತಿವರೆಗಿನ ವ್ಯಾಸಂಗ ಮಾಡುತ್ತಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಅಧಿಕೃತವಾಗಿ ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳಾವುವು ; ಅನಧಿಕೃತವಾಗಿ ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳಾವುವು ;

(ಇ) ಇವುಗಳಲ್ಲಿ ಕೆಲವೊಂದು ವಿದ್ಯಾ ಸಂಸ್ಥೆಗಳು ಪೋಷಕರಿಂದ ಸರ್ಕಾರ ನಿಗದಿಪಡಿಸಿರುವ ಶುಲ್ಕಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಶುಲ್ಕ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅಂತಹ ಶಿಕ್ಷಣ ಸಂಸ್ಥೆಗಳು ಯಾವುವು ; ಅವುಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಶಿಕ್ಷಣ ಸಂಸ್ಥೆಗಳ ಶುಲ್ಕವನ್ನು ಪಡೆಯುವಾಗ ಬ್ಯಾಂಕ್ ಹುಂಡಿಯ ಮುಖಾಂತರವೇ ಪಡೆಯಬೇಕೆಂಬ ಆದೇಶವನ್ನು ಸರ್ಕಾರ ಹೊರಡಿಸಿದೆಯೇ ; ಹಾಗಿದ್ದಲ್ಲಿ ಈ ಆದೇಶ ಯಾವ ದಿನಾಂಕದಿಂದ ಜಾರಿಗೆ ಬಂದಿದೆ ಹಾಗೂ ಈ ಆದೇಶವನ್ನು ಪಾಲನೆ ಮಾಡದ ಶಿಕ್ಷಣ ಸಂಸ್ಥೆಗಳ ವಿರುದ್ಧ ಸರ್ಕಾರ ಕೈಗೊಂಡ ಶಿಸ್ತಿನ ಕ್ರಮಗಳೇನು ?

## ವಸತಿ ಸೌಲಭ್ಯಗಳ ಹಂಚಿಕೆಯ ಕ್ರಮ ಕುರಿತು

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೯(೪೧೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಸತಿ ಸಮಸ್ಯೆಯು ಗಂಭೀರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಯಾವ ಯಾವ ಯೋಜನೆಗಳ ಅಡಿಯಲ್ಲಿ ಎಷ್ಟು ಹೊಸ ಮನೆಗಳನ್ನು ನಿರ್ಮಿಸಿ ಹಂಚಿಕೆ ಮಾಡಲಾಗಿದೆ ; ಫಲಾನುಭವಿಗಳನ್ನು ಗುರುತಿಸುವ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಇ) ಅದರಂತೆ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ;

(ಈ) ಪರಿಶಿಷ್ಠ ಜಾತಿ/ ಪಂಗಡದ ಜನರಿಗೆ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ?

## ಅಕ್ರಮ ಮರಳು ಸಾಗಾಣಿಕೆ ನಿಯಂತ್ರಿಸುವ ಬಗ್ಗೆ

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೦(೪೯೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಮುಖ್ಯ ನದಿಗಳ ಪಾತ್ರದಲ್ಲಿನ ಅನಿಯಂತ್ರಿತ ಅಕ್ರಮ ಮರಳು ಗಣಿಗಾರಿಕೆಯಿಂದಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವುದಲ್ಲದೇ ಪರಿಸರಕ್ಕೆ ತೀವ್ರ ಹಾನಿ ಮತ್ತು ವಿದ್ಯುತ್ ಉತ್ಪಾದನೆಗೂ ತೊಂದರೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಗಟ್ಟಿ, ಪರಿಸರವನ್ನು ಸಂರಕ್ಷಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಈ ಬಗ್ಗೆ ಕಟ್ಟು ನಿಟ್ಟಿನ ಕಾನೂನು ರಚಿಸಲಾಗುವುದೇ ?

## ಗ್ರಾಮ ಪಂಚಾಯಿತಿಯ ಕ್ಲರ್ಕ್ ಕಮ್ ಡಾಟಾ ಎಂಟ್ರಿ ಆಪರೇಟರ್ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೧(೪೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ಲರ್ಕ್ ಕಮ್ ಡಾಟಾ ಎಂಟ್ರಿ ಆಪರೇಟರ್‌ಗಳ ಸಂಖ್ಯೆ ಎಷ್ಟು ; ಈ ಪೈಕಿ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆ ಪಡೆದ ಕ್ಲರ್ಕ್ ಕವಮ್ ಡಾಟಾ ಎಂಟ್ರಿ ಆಪರೇಟರ್‌ಗಳ ಸಂಖ್ಯೆ ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ಈವರೆವಿಗೂ ಅನುಮೋದನೆ ಪಡೆಯದ ಕ್ಲರ್ಕ್ ಕಮ್ ಡಾಟಾ ಎಂಟ್ರಿ ಆಪರೇಟರ್‌ಗಳ ಸಂಖ್ಯೆ ಎಷ್ಟು ಮತ್ತು ಅನುಮೋದನೆ ನೀಡದೆ ಇರಲು ಕಾರಣಗಳೇನು ?

## ಗ್ರಾಮ ಪಂಚಾಯಿತಿ ಸದಸ್ಯರ ಗೌರವಧನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೭(೪೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದಿನ ಗ್ರಾಮ ಪಂಚಾಯಿತಿ ಸದಸ್ಯರಿಗೆ ಗೌರವಧನವನ್ನು ನೀಡಲಾಗಿದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಆ) ಹಿಂದಿನ ಗ್ರಾಮ ಪಂಚಾಯಿತಿ ಸದಸ್ಯರ ಗೌರವಧನವನ್ನು ನೀಡಿಲ್ಲವಾದರೆ ಈ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಿಂದಿನ ಗ್ರಾಮ ಪಂಚಾಯಿತಿ ಸದಸ್ಯರು ಮತ್ತು ಹಾಲಿ ಗ್ರಾಮ ಪಂಚಾಯಿತಿ ಸದಸ್ಯರಿಗೆ ನೀಡಬೇಕಾದ ಬಾಕಿ ಗೌರವಧನ ಎಷ್ಟು ? (ಪೂರ್ಣ ವಿವರ ನೀಡುವುದು)

## ಮಂಡ್ಯ ಜಿಲ್ಲೆಯ ಪ್ರವಾಸೋದ್ಯಮದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೩(೪೦೬) ಮಾನ್ಯ ಬೃಹತ್ ಮತ್ತು ಮಾಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ಒಳಪಟ್ಟ ಪ್ರವಾಸಿ ಸ್ಥಳಗಳ ಸಂಖ್ಯೆ ಎಷ್ಟು ; (ಪ್ರವಾಸಿ ಸ್ಥಳಗಳ ಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಮಂಡ್ಯ ಜಿಲ್ಲೆ ಪ್ರವಾಸಿ ಸ್ಥಳಗಳ ಅಭಿವೃದ್ಧಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ಅವುಗಳ ಪೂರ್ಣ ವಿವರ ನೀಡುವುದು)

## ಮಂಡ್ಯ ಜಿಲ್ಲೆಯಲ್ಲಿ ಬಹುಗ್ರಾಮಗಳ ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೪(೪೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಸಬ್‌ಮಿಷನ್ (ಬಹು ಗ್ರಾಮ ಕುಡಿಯುವ ನೀರಿನ) ಯೋಜನೆಯಲ್ಲಿ ಮಂಡ್ಯ ಜಿಲ್ಲೆಗೆ ಮಂಜೂರಾಗಿರುವ ಕಾಮಗಾರಿಗಳು ಎಷ್ಟು ; (ಕಾಮಗಾರಿಗಳ ಹೆಸರು ಮತ್ತು ಅಂದಾಜು ಮೊತ್ತ ಪೂರ್ಣ ವಿವರಗಳನ್ನು ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಈ ಯೋಜನೆಯಡಿ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ;

(ಇ) ಈ ಯೋಜನೆಯಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳಲ್ಲಿ ಎಷ್ಟು ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ ;

(ಈ) ಸದರಿ ಯೋಜನೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ವಿಳಂಬವಾಗಿದ್ದರೆ ಇದಕ್ಕೆ ಕಾರಣಗಳು ಏನು ;

(ಉ) ಸಬ್‌ಮಿಷನ್ ಯೋಜನೆಯಲ್ಲಿ ಮಂಡ್ಯ ಜಿಲ್ಲೆಯಲ್ಲಿ ಹೊಸದಾಗಿ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆಯೇ ; (ಅವುಗಳ ಕಾಮಗಾರಿವಾರು ವಿವರಗಳನ್ನು ನೀಡುವುದು)

(ಊ) ಮಂಡ್ಯ, ನಾಗಮಂಗಲ ತಾಲ್ಲೂಕು, ಆದಿಚುಂಚನಗಿರಿ ಕ್ಷೇತ್ರ ಮತ್ತು ಇತರೆ ಗ್ರಾಮಗಳಿಗೆ ಸಬ್‌ಮಿಷನ್ ಯೋಜನೆಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆ ಯಾವ ಹಂತದಲ್ಲಿದೆ ;

(ಋ) ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಿ ಪೂರ್ಣಗೊಳಿಸಲಾಗುವುದು ? (ಪೂರ್ಣ ವಿವರವನ್ನು ನೀಡುವುದು)

## ಕಲುಬುರಗಿ ಜಿಲ್ಲೆಯಲ್ಲಿ ವಸತಿ ಇಲಾಖೆಯಿಂದ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡ ಜನಾಂಗದ ಅಭಿವೃದ್ಧಿ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೩೭೫(೩೬೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಕಲುಬುರಗಿ ಜಿಲ್ಲೆಯಲ್ಲಿ ವಸತಿ ಇಲಾಖೆ ವತಿಯಿಂದ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಜನಾಂಗದವರಿಗೆ ವಸತಿ ಸೌಕರ್ಯಕ್ಕಾಗಿ ನಿಗದಿಪಡಿಸಿದ ಮತ್ತು ಖರ್ಚಾದ ಮೊತ್ತವೆಷ್ಟು ; (ವಿವರ ಒದಗಿಸುವುದು)

(ಆ) ಇಂತಹ ನಿಗಧಿಯಾದ ಮೊತ್ತವನ್ನು ಯಾವ ಯಾವ ಉದ್ದೇಶಕ್ಕಾಗಿ ಬಳಕೆ ಮಾಡಲಾಗಿದೆ ; (ವಿವರ ಒದಗಿಸುವುದು)

(ಇ) ಖರ್ಚಾದ ಮೊತ್ತದಿಂದ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ಫಲಾನುಭವಿಗಳಿಗೆ ಅನುಕೂಲವಾಗಿದೆಯೇ ?

# ಕೈಗಾರಿಕೆ ಉದ್ದೇಶಕ್ಕೆ ಭೂ ಸ್ವಾಧೀನ ಪಡಿಸಿಕೊಂಡ ಜಮೀನುಗಳಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಕಾಂತರಾಜ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೬(೨೯೩) ಮಾನ್ಯ ಬೃಹತ್ ಮತ್ತು ಮಾಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಕೈಗಾರಿಕೆ ಸ್ಥಾಪನೆಯ ಉದ್ದೇಶಕ್ಕೆ ರೈತರುಗಳ ಎಷ್ಟು ಎಕರೆ ಜಮೀನುಗಳನ್ನು ಭೂ ಸ್ವಾಧೀನಪಡಿಸಿಕೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಯಾವ ಯಾವ ತಾಲ್ಲೂಕುಗಳಲ್ಲಿ ಈವರೆವಿಗೂ ಕೈಗಾರಿಕೆಗಳನ್ನು ಸ್ಥಾಪಿಸಿರುವುದಿಲ್ಲ ;

(ಇ) ರೈತರಿಂದ ಜಮೀನುಗಳನ್ನು ಭೂ ಸ್ವಾಧೀನಪಡಿಸಿಕೊಂಡ ಸರ್ಕಾರ ರೈತರಿಗೆ ಇದುವರೆವಿಗೂ ಪೂರ್ಣ ಪ್ರಮಾಣದಲ್ಲಿ ಪರಿಹಾರ ನೀಡಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಈ) ಅಲ್ಲದೆ ರೈತರಿಂದ ವಶಪಡಿಸಿಕೊಂಡ ಜಮೀನುಗಳಿಗೆ ಪರಿಹಾರ ನೀಡಲು ಬಾಕಿ ಇರುವ ಪ್ರಕರಣಗಳೆಷ್ಟು ; ಈ ಪ್ರಕರಣಗಳ ಒಟ್ಟು ಮೊತ್ತವೆಷ್ಟು ; (ವಿವರ ನೀಡುವುದು)

(ಉ) ಬಾಕಿ ಇರುವ ಮೊತ್ತವನ್ನು ಎಷ್ಟು ದಿನಗಳೊಳಗೆ ರೈತರಿಗೆ ವಿತರಣೆ ಮಾಡಲಾಗುವುದು ಎಂಬುದರ ಬಗ್ಗೆ ಸ್ಪಷ್ಟನೆ ನೀಡುವುದು ?

## ಕನ್ನಡ ಚಲನಚಿತ್ರಗಳಿಗೆ ಸಹಾಯಧನದ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೭(೪೨೦) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಚಲನಚಿತ್ರಗಳಿಗೆ ಸಹಾಯಧನ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಇದಕ್ಕೆ ಕಾರಣಗಳೇನು ;

(ಆ) ಇತ್ತೀಚಿನ ದಿನಗಳಲ್ಲಿ ಪ್ರಶಸ್ತಿ ಹಾಗೂ ಸಹಾಯಧನ ವಿಷಯಗಳಲ್ಲಿ ನಿರ್ಮಾಪಕರು ಪದೇ ಪದೇ ನ್ಯಾಯಾಲಯದ ಮೆಟ್ಟಿಲೇರುತ್ತಿರುವುದು ನಿಜವೇ ;

(ಇ) ಚಲನಚಿತ್ರಗಳಿಗೆ ಸಹಾಯಧನ ನೀಡುತ್ತಿರುವಾಗ ಲಂಚ, ರುಷವತ್ತುಗಳು ನಡೆಯುತ್ತಿರುವ ಬಗ್ಗೆ ವರದಿ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಗ್ರಾಮ ಪಂಚಾಯಿತಿಗಳಿಗೆ ಅನುದಾನ ಬಿಡುಗಡೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೮(೪೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನವಲಗುಂದ ತಾಲ್ಲೂಕಿನ ಗ್ರಾಮ ಪಂಚಾಯಿತಿ ಸದಸ್ಯರಿಗೆ ಗೌರವಧನ ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ;

(ಇ) ಹಾವೇರಿ ಜಿಲ್ಲೆ ಹಾಗೂ ನವಲಗುಂದ ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಿಗೆ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ?

## ಬಹುಗ್ರಾಮ ಯೋಜನೆಯಡಿ ಕುಡಿಯುವ ನೀರಿನ ಸರಬರಾಜು ಬಗ್ಗೆ

**ಶ್ರೀ ವಿವೇಕರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೯(೪೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಭೀರನಾಳ ಗ್ರಾಮ ಹಾಗೂ ೧೩ ಗ್ರಾಮಗಳು ಸೇರಿ ಬಹುಗ್ರಾಮ ಯೋಜನೆಯಡಿ ಕುಡಿಯುವ ನೀರು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರತರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸಿ ಕುಡಿಯುವ ನೀರಿನ ಸೌಲಭ್ಯ ಒದಗಿಸಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆಗೆ ಇದುವರೆವಿಗೂ ನಿಗಧಿಪಡಿಸಿ ಬಿಡುಗಡೆ ಮಾಡಿದ ಅನುದಾನವೆಷ್ಟು ; ಖರ್ಚು ಮಾಡಲಾದ ಮೊತ್ತವೆಷ್ಟು ? (ಮಾಹಿತಿ ನೀಡುವುದು)

## ಬೆಳಗಾವಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ತೊಂದರೆಯ ಬಗ್ಗೆ

**ಶ್ರೀ ವಿವೇಕರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೦(೪೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಾದ್ಯಂತ ಬರಗಾಲವಿರುವುದರಿಂದ ಕುಡಿಯುವ ನೀರಿನ ತೀವ್ರ ಸಮಸ್ಯೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲಾಡಳಿತ ತೀವ್ರ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಿಗೆ ಖಾಸಗಿಯವರಿಂದ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಖಾಸಗಿ ಟ್ಯಾಂಕರ್ ಮಾಲೀಕರು ಒಂದು ಟ್ಯಾಂಕರ್ ನೀರು ಸರಬರಾಜು ಮಾಡಿ ಹೆಚ್ಚಿನ ಮೊತ್ತದ ಬಿಲ್ಲು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರ್ಕಾರ ನೀರು ಸರಬರಾಜು ಮಾಡಲು ಬಿಡುಗಡೆ ಮಾಡಿದ ಅನುದಾನವೆಷ್ಟು ; ಕಳೆದ ೬ ತಿಂಗಳುಗಳಿಂದ ಖಾಸಗಿ ಟ್ಯಾಂಕರ್ ಮಾಲೀಕರಿಗೆ ಕುಡಿಯುವ ನೀರು ಸರಬರಾಜು ಮಾಡಲು ಪಾವತಿಸಲಾದ ಮೊತ್ತವೆಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಖಾಸಗಿಯವರಿಂದ ಕುಡಿಯುವ ನೀರು ಸರಬರಾಜು ಮಾಡುವ ಬದಲಾಗಿ ಸರ್ಕಾರವೇ ಟ್ಯಾಂಕ್‌ಗಳನ್ನು ಖರೀದಿಸಿ ನೀರು ಸರಬರಾಜು ಮಾಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಬೆಳಗಾವಿ ಜಿಲ್ಲೆಯ ರಾಯಭಾಗ ಪಟ್ಟಣದ ಕುಡಿಯುವ ನೀರಿನ ಸಮಸ್ಯೆ

**ಶ್ರೀ ವಿವೇಕರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೧(೪೧೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆ, ರಾಯಭಾಗ ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ;

(ಆ) ಕೃಷ್ಣ ನದಿಯಿಂದ ರಾಯಭಾಗ ಪಟ್ಟಣಕ್ಕೆ ಕುಡಿಯುವ ನೀರನ್ನು ಸರಬರಾಜು ಮಾಡಲು ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಯೋಜನೆಗೆ ಕ್ರಿಯಾ ಯೋಜನೆ ತಯಾರಿಸಿದ್ದು, ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆಯೇ ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಈ ಯೋಜನೆಗೆ ಮೀಸಲಿಟ್ಟ ಹಣವೆಷ್ಟು ; ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ಹಾಗೂ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಿ ಕುಡಿಯುವ ನೀರಿನ ಸೌಲಭ್ಯ ಒದಗಿಸಲಾಗುವುದು ; (ಮಾಹಿತಿ ನೀಡುವುದು)

(ಉ) ಈ ಯೋಜನೆಗೆ ಇದುವರೆವಿಗೂ ನಿಗದಿಪಡಿಸಿ ಬಿಡುಗಡೆ ಮಾಡಿದ ಅನುದಾನವೆಷ್ಟು ; ಖರ್ಚು ಮಾಡಲಾದ ಮೊತ್ತವೆಷ್ಟು ? (ಮಾಹಿತಿ ನೀಡುವುದು)

## ಬೆಳಗಾವಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಬಗ್ಗೆ

**ಶ್ರೀ ವಿವೇಕರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೨(೪೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಗೆ ನೂತನವಾಗಿ ಮಂಜೂರಾಗಿರುವ ಗ್ರಾಮ ಪಂಚಾಯಿತಿಗಳೆಷ್ಟು ; ಅವುಗಳಿಗೆ ಸರ್ಕಾರದಿಂದ ಪ್ರತ್ಯೇಕ ಅನುದಾನ ಮಂಜೂರು ಮಾಡಲಾಗಿದೆಯೇ ;

(ಆ) ಹೊಸದಾಗಿ ಮಂಜೂರಾದ ಗ್ರಾಮ ಪಂಚಾಯಿತಿಗಳಿಗೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ತುರ್ತಾಗಿ ಭರ್ತಿಮಾಡಲು ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ಪಂಚಾಯಿತಿ ಭವನ ನಿರ್ಮಾಣ

**ಶ್ರೀ ವಿವೇಕರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩(೪೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ತಾಲ್ಲೂಕುಗಳ ಗ್ರಾಮಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ಬೆಳಗಾವಿ ಜಿಲ್ಲಾ ಕೇಂದ್ರಗಳಿಗೆ ಸಾರ್ವಜನಿಕ ಕೆಲಸ ನಿಮಿತ್ತ ಬೇಟಿ ನೀಡುವ ಸಂದರ್ಭದಲ್ಲಿ ಯಾವುದೇ ವಸತಿ ಸೌಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗ್ರಾಮ ಪಂಚಾಯಿತಿ ಪ್ರತಿನಿಧಿಗಳಿಗೆ ಜಿಲ್ಲಾ ಕೇಂದ್ರದಲ್ಲಿ ವಸತಿ ಸೌಲಭ್ಯ ಒದಗಿಸಲು ಪಂಚಾಯಿತಿ ಭವನ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಈ ಭವನ ನಿರ್ಮಿಸಲು ೨ ಎಕರೆ ವಿಸ್ತೀರ್ಣದ ಜಾಗವನ್ನು ಮಂಜೂರು ಮಾಡಿ ಅಗತ್ಯ ಅನುದಾನ ನೀಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಅಧಿವೇಶನವೂ ಸೇರಿದಂತೆ ಕಲಾಪಗಳ ಪ್ರಸಂಗಕ್ಕೆ ಪ್ರತ್ಯೇಕ ಚಾನಲ್ ಸ್ಥಾಪನೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೪(೭೦) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಧಾನ ಸಭಾ ಮತ್ತು ವಿಧಾನ ಪರಿಷತ್ತು ಅಧಿವೇಶನ ಕಾರ್ಯಕಲಾಪಗಳನ್ನು ಪ್ರಸಾರ ಮಾಡುವ ನಿಟ್ಟಿನಲ್ಲಿ ಪ್ರತ್ಯೇಕ ಟಿ.ವಿ. ವಾಹಿನಿಯನ್ನು (ಚಾನಲ್) ಪ್ರಾರಂಭಿಸುವ ಆಲೋಚನೆಯು ಸರ್ಕಾರದ ಪರಿಶೀಲನೆಯಲ್ಲಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಇದುವರೆಗಿನ ಕ್ರಮಗಳು ಏನು : (ಪ್ರತ್ಯೇಕವಾದ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಅಧಿವೇಶನ ಹೊರತುಪಡಿಸಿದ ಸಮಯದಲ್ಲಿ ಈ ಚಾನಲ್‌ನನ್ನು ವರ್ಷ ಪೂರ್ತಿ ಕ್ರಿಯಾಶೀಲವಾಗಿಸುವ ನಿಟ್ಟಿನಲ್ಲಿ ಸರ್ಕಾರದ ಆಲೋಚನೆ ಏನು ; ಇದಕ್ಕೆ ತಗುಲುವ ವೆಚ್ಚ ಮತ್ತು ಇತರೆ ಸಂಸದೀಯ ಕಾರ್ಯಕ್ರಮಗಳ ಪ್ರಸಾರದ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳು ಏನು ? (ಸಂಪೂರ್ಣ ಮಾಹಿತಿ ಒದಗಿಸುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0283/1000 ಪ್ರತಿಗಳು/27–02–2016